ಸಂಪುಟ : 10 ಸಂಚಿಕೆ 8 ಪುಟ : 4+2 ಬೆಲೆ: 3.00 ರವಿವಾರ ಫೆಬ್ರವರಿ 2 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 8 Pages : 4+2 Price : 3.00 Sunday February 2 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಕೇಂದ್ರ ಬಜೆಟ್ ಮಂಡಿಸಿದ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್

# ಜಿಲ್ಲೆಯಲ್ಲಿ ಮಿಶ್ರ ಪ್ರತಿಕ್ರಿಯೆ | ಸ್ವಲ್ಪ ಸಿಹಿ-ಸ್ವಲ್ಪ ಕಹಿ ಬಜೆಟ್

■ವಿಜಯಸಾಕ್ಷಿ ಸುದ್ದಿ, ಗದಗ



ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಶನಿವಾರ ಕೇಂದ್ರ ಬಜೆಟ್ ಮಂಡನೆ ಮಾಡಿದ್ದಾರೆ. ಅವರು ಮಂಡನೆ ಮಾಡಿರುವ 8ನೇ ಬಜೆಟ್ ಆಗಿದೆ. ಈ ಮೂಲಕ ಅತೀ ಹೆಚ್ಚು ಬಜೆಟ್ ಮಂಡನೆ ಮಾಡಿದ ಕೀರ್ತಿಗೆ ಅವರು ಪಾತ್ರರಾಗಿದ್ದಾದಾರೆ.

ಈ ಬಜೆಟ್‌ನಲ್ಲಿ ಮಧ್ಯಮ ವರ್ಗದವರ ಕೃಷಿ ಕ್ಷೇತ್ರ, ದಿನನಿತ್ಯ ಬಳಕೆ ವಸ್ತುಗಳು ಸೇರಿದಂತೆ ಇನ್ನಿತರೆ ಪ್ರಮುಖ ವಸ್ತುಗಳ ಮೇಲಿನ ದರ ಇಳಿಸುವ ನಿರೀಕ್ಷೆಗಳನ್ನು ಇಟ್ಟುಕೊಂಡಿದ್ದರು. ಅದರಂತೆಯೇ ಕೆಲವು ವಸ್ತುಗಳ ದರಗಳನ್ನು ಇಳಿಕೆ ಮಾಡಲಾಗುವುದು ಎಂದು ನಿರ್ಮಲಾ ಸೀತಾರಾಮನ್ ಬಜೆಟ್‌ನಲ್ಲಿ ಘೋಷಣೆ ಮಾಡಿದ್ದಾರೆ.

ನರೇಂದ್ರ ಮೋದಿ ನೇತೃತ್ವದ ಸರ್ಕಾರದ 3ನೇ ಅವಧಿಯ ಮೊದಲ ಪೂರ್ಣ ಪ್ರಮಾಣದ ಬಜೆಟ್ ಇದಾಗಿದ್ದು, ಈ ಪೈಕಿ 6 ಪೂರ್ಣ ಮತ್ತು 2 ಮಧ್ಯಂತರ ಬಜೆಟ್‌ಗಳು ಸೇರಿವೆ. ಈ ಬಾರಿಯ ಬಜೆಟ್ ಕುರಿತು ಜಿಲ್ಲೆಯಾದ್ಯಂತ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ.

## ಅತ್ಯುತ್ತಮ ಬಜೆಟ್



ಕೇಂದ್ರ ವಿತ್ತ ಸಚಿವರಾದ ನಿರ್ಮಲಾ ಸೀತಾರಾಮನ್ ಮಂಡಿಸಿರುವ ಪ್ರಸಕ್ತ ಸಾಲಿನ ಬಜೆಟ್ ಬಡ, ಮಧ್ಯಮ ವರ್ಗ ಸೇರಿದಂತೆ ಸಮಾಜದ ಎಲ್ಲಾ ವರ್ಗಗಳಿಗೂ ಪೂರಕವಾಗಿದೆ.

ಮೀನುಗಾರ ವಲಯಕ್ಕೆ 60 ಸಾವಿರ ಕೋಟಿ, ಎಸ್ಸಿ-ಎಸ್ಟಿ ಉದ್ಯಮ ಸ್ಥಾಪನೆಗೆ 2 ಕೋಟಿವರೆಗೂ ಸಾಲ, ಸಣ್ಣ ಕೈಗಾರಿಕೆಗಳ ಉತ್ತೇಜನಕ್ಕೆ ವಿಶೇಷ ಆದ್ಯತೆ, ಗರ್ಭಿಣಿ ಸ್ತ್ರೀಯರು ಸೇರಿದಂತೆ ನವಜಾತ ಶಿಶು, ಹಾಲುಣಿಸುವ ತಾಯಂದಿರಿಗೆ ಪೌಷ್ಠಿಕ ಆಹಾರ ವಿತರಣೆ. ಸರಕಾರಿ ಪ್ರೌಢಶಾಲೆಗಳಿಗೆ ಇಂಟರ್‌ನೆಟ್ ಸೌಲಭ್ಯ, ಪ್ರತಿಯೊಂದು ಜಿಲ್ಲೆಗಳಲ್ಲಿಯೂ ಕ್ಯಾನ್ಸರ್ ಸೆಂಟರ್ ಪ್ರಾರಂಭ, ಬೀದಿ ಬದಿ ವ್ಯಾಪಾರಿಗಳಿಗೆ ಕೇಂದ್ರ ಸರ್ಕಾರದಿಂದ ಸಾಲ ಸೌಲಭ್ಯ, ನಗರಾಭಿವೃದ್ಧಿಗೆ ವಿಶೇಷ ಅನುದಾನ, ರೈತರಿಗಾಗಿ ಕಿಸಾನ್ ಕ್ರೆಡಿಟ್ ಕಾರ್ಡ್, ಕೈಗಾರಿಕೆಗಳ ಅಭಿವೃದ್ಧಿಗೆ ಮತ್ತು ಹೊಸ ಕೈಗಾರಿಕೆಗಳ ಸ್ಥಾಪನೆಗೆ ವಿಶೇಷ ಗಮನ, ತೆರಿಗೆ ಪದ್ಧತಿಯಲ್ಲಿ ಸಾಕಷ್ಟು ಸರಳೀಕರಣ ಮಾಡಿರುವುದು, 12 ಲಕ್ಷದವರೆಗೆ ಆದಾಯಕ್ಕೆ ತೆರಿಗೆ ವಿನಾಯ್ತಿ ನೀಡಿರುವುದು ಸೇರಿದಂತೆ ಸಮೃದ್ಧ ಭಾರತ ನಿರ್ಮಾಣಕ್ಕೆ ವಿಶೇಷ ಆದ್ಯತೆ ಬಜೆಟ್ ಇದಾಗಿದೆ.

ಸಿ.ಸಿ. ಪಾಟೀಲ. **ನರಗುಂದ ಶಾಸಕರು.**

## ಜನ ಸಾಮಾನ್ಯರ ಬಜೆಟ್



ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಬಜೆಟ್ ಮಂಡಿಸಿದ್ದು, ಇದೊಂದು ಜನ ಸಾಮಾನ್ಯರ ಬಜೆಟ್ ಆಗಿದೆ.

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ 9ನೇ ಬಾರಿಗೆ ಬಜೆಟ್ ಮಂಡಿಸಿ ದಾಖಲೆ ನಿರ್ಮಿಸಿದ್ದಾರೆ. ಈ ಬಜೆಟ್‌ನಲ್ಲಿ ಹಿರಿಯರ ಆರೋಗ್ಯದ ಕಡೆಗೆ ಹೆಚ್ಚಿನ ಸೌಲಭ್ಯ, ಆರೋಗ್ಯ ಕ್ಷೇತ್ರಕ್ಕೆ ಹೆಚ್ಚಿನ ಅನುದಾನ ಇರಿಸಿದ್ದಾರೆ. ಬಜೆಟ್‌ನಲ್ಲಿ ಅನೇಕ ಯೋಜನೆಗಳನ್ನು ಜಾರಿಗೆ ತಂದಿದ್ದು, ಎಸ್.ಸಿ, ಎಸ್.ಟಿ ಮಹಿಳೆಯರಿಗೆ ಹೆಚ್ಚಿನ ಅನುದಾನವನ್ನು ತೆಗೆದಿರಿಸಿದ್ದಾರೆ. ಮೊಬೈಲ್, ಎಲ್.ಇ.ಡಿ ಟಿವಿ, ಲಿಥಿಯಮ್ ಬ್ಯಾಟರಿ, ಎಲೆಕ್ಟ್ರಿಕ್ ವಾಹನ, ಚರ್ಮೋದ್ಯಮಗಳ ಬೆಲೆ ಇಳಿಕೆ ಮಾಡಿದ್ದು, 2025ರ ಕೇಂದ್ರ ಬಜೆಟ್ ವಿಶೇಷವಾಗಿದೆ.

– ಬೂದಪ್ಪ ಹಳ್ಳಿ.
**ಬಿಜೆಪಿ ಗದಗ ಗ್ರಾಮೀಣ ಮಂಡಲಾಧ್ಯಕ್ಷ.**

## ಅಭಿವೃದ್ಧಿಯ ಬಜೆಟ್



ಕೇಂದ್ರ ಬಿಜೆಪಿ ಸರ್ಕಾರವು ಇಡೀ ದೇಶಕ್ಕೆ ಶುಭಪ್ರದವಾದ ಬಜೆಟ್ ನೀಡಿದೆ. ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ದೇಶದ ಜನ ಸಾಮಾನ್ಯರ ಅಭಿವೃದ್ಧಿಗೆ ಪೂರಕ ಬಜೆಟ್ ನೀಡಿದ್ದು, ಆದಾಯ ತೆರಿಗೆ ವಿನಾಯಿತಿ, ಶಿಕ್ಷಣ ಕ್ಷೇತ್ರದ ಕೊಡುಗೆ, ಎಂಎಸ್‌ಎಂಇಗಳಿಗೆ ಆರ್ಥಿಕ ಶಕ್ತಿ ಸೇರಿದಂತೆ ಹಲವಾರು ಯೋಜನೆಗಳನ್ನು ದೇಶದ ಜನರಿಗೆ ನೀಡುವ ಮೂಲಕ ಐತಿಹಾಸಿಕ ಬಜೆಟ್ ಮಂಡಿಸಿದ್ದಾರೆ.

ಈ ಬಾರಿಯ ಬಜೆಟ್‌ನಲ್ಲಿ 12 ಲಕ್ಷ ರೂ.ವರೆಗಿನ ಆದಾಯಕ್ಕೆ ಯಾವುದೇ ತೆರಿಗೆ ಇಲ್ಲ, ಮೊಬೈಲ್ ಫೋನ್, ಬ್ಯಾಟರಿ ಸೇರಿದಂತೆ 28 ಬಂಡವಾಳ ಸರಕುಗಳ ನೇರ ತೆರಿಗೆಯಲ್ಲಿ ವಿನಾಯಿತಿ, ಸ್ಟಾರ್ಟ್‌ಅಪ್ ತೆರಿಗೆ ಪ್ರಯೋಜನಗಳನ್ನು ಮುಂದಿನ 5 ವರ್ಷಕ್ಕೆ ವಿಸ್ತರಣೆ, ಪಿಎಂ ಜನ ಆರೋಗ್ಯ ಯೋಜನೆ ಮೂಲಕ ಕಾರ್ಮಿಕರಿಗೆ ಆರೋಗ್ಯ ವಿಮೆ ಸೌಲಭ್ಯ, 10 ಲಕ್ಷ ರೂ.ವರೆಗಿನ ಶಿಕ್ಷಣ ಸಾಲದ ಮೇಲಿನ ವಿನಾಯಿತಿ ಮುಂತಾದವು ಜನಪರ ಯೋಜನೆಗಳಾಗಿವೆ.

– ವಸಂತ ಪಡಗದ. **ಬಿಜೆಪಿ ಮುಖಂಡ.**

## ದೇಶದ ಪ್ರಗತಿಯ ಬಜೆಟ್



ಕೇಂದ್ರ ಸರ್ಕಾರದ ಹಣಕಾಸು ಸಚಿವರಾದ ನಿರ್ಮಲಾ ಸೀತಾರಾಮನ್ ಅವರು ಮಂಡಿಸಿರುವ 2025ರ ಬಜೆಟ್ ದೇಶದ ಪ್ರಗತಿಯ ಬಜೆಟ್ ಆಗಿದೆ.

ರೈತರ ಕಿಸಾನ್ ಕಾರ್ಡ್ ಮಿತಿ 5 ಲಕ್ಷ ರೂ.ಗೆ ಏರಿಕೆ, 12 ಲಕ್ಷದವರೆಗೆ ಆದಾಯ ತೆರಿಗೆ ವಿನಾಯಿತಿ, ಪ್ರತಿ ಜಿಲ್ಲಾ ಆಸ್ಪತ್ರೆಗಳಲ್ಲಿ ಕ್ಯಾನ್ಸರ್ ಚಿಕಿತ್ಸೆ, ಎಸ್‌ಸಿ-ಎಸ್‌ಟಿ ಮಹಿಳೆಯರಿಗೆ ಉದ್ಯೋಗಕ್ಕೆ 2 ಕೋಟಿ ರೂ.ವರೆಗೂ ಸಾಲದ ವ್ಯವಸ್ಥೆ, ಮೊಬೈಲ್, ಟಿವಿ ಇಲೆಕ್ಟ್ರಿಕ್ ಕಾರ್ ದರ ಇಳಿಕೆ ಸೇರಿದಂತೆ ಹಲವಾರು ಕ್ಷೇತ್ರಗಳಲ್ಲಿ ದೇಶದ ಜನರ ಪರವಾಗಿ 2047ರ ವಿಕಸಿತ ಭಾರತದ ಪರವಾದ ಅತ್ಯುತ್ತಮ ಬಜೆಟ್ ಆಗಿದೆ.

– ಅನಿಲ್ ಅಬ್ಬಿಗೇರಿ. **ನಗರಸಭೆ ಸದಸ್ಯ.**

## ಅಲ್ಪಸಂಖ್ಯಾತರ ವಿರೋಧಿ ಬಜೆಟ್



ಕೇಂದ್ರ ಸರ್ಕಾರದ ಬಜೆಟ್ ಸಂಪೂರ್ಣವಾಗಿ ವಿಫಲವಾಗಿದೆ. ಬಜೆಟ್‌ನಲ್ಲಿ ಯುವಕರಿಗೆ ಉದ್ಯೋಗ ಹಾಗೂ ರೈತರಿಗೆ ಯಾವುದೇ ಹೊಸ ಯೋಜನೆಗಳು ಇಲ್ಲ. ಕರ್ನಾಟಕ ರಾಜ್ಯಕ್ಕೆ ಸಂಪೂರ್ಣ ದ್ರೋಹವಾಗಿದೆ. ನಮ್ಮ ರಾಜ್ಯಕ್ಕೆ ಯಾವುದೇ ಹೊಸ ಯೋಜನೆಗಳಿಲ್ಲ. ರಾಜ್ಯದಿಂದ ಲಕ್ಷ ಕೋಟಿ ಜಿಎಸ್‌ಟಿ ವಸೂಲಿ ಮಾಡುತ್ತಿರುವ ಕೇಂದ್ರ ಸರ್ಕಾರ ನಮ್ಮ ರಾಜ್ಯಕ್ಕೆ ಹಾಗೂ ಜನರಿಗೆ ಅನ್ಯಾಯವೆಸಗಿದೆ.

– ಸೈಯದ್ ಖಾಲಿದ್ ಕೊಪ್ಪಳ.
**ಕಾಂಗ್ರೆಸ್ ಮುಖಂಡ.**

## ಜನಸ್ನೇಹಿ ಬಜೆಟ್



ಎಲ್ಲ ವರ್ಗದ ಜನರಿಗೂ ಅನುಕೂಲ ಮಾಡಿಕೊಡುವ ಬಜೆಟ್ ಆಗಿದೆ. ಇದೊಂದು ಸಾರ್ವಕಾಲಿಕ, ಜನಸ್ನೇಹಿ ಬಜೆಟ್ ಆಗಿದೆ.

ಈ ಬಜೆಟ್‌ನಲ್ಲಿ ಹಿರಿಯರ ಆರೋಗ್ಯದ ಕಡೆಗೆ ಹೆಚ್ಚಿನ ಸೌಲಭ್ಯಗಳನ್ನು ಒದಗಿಸಿದ್ದಾರೆ. ಕ್ಯಾನ್ಸರ್ ಔಷಧಿ ಆಮದು ಮಾಡಿಕೊಳ್ಳುವ ತೆರಿಗೆಯನ್ನು ಸಂಪೂರ್ಣ ರದ್ದುಪಡಿಸಿರುವುದು ಜನರ ಆರೋಗ್ಯ ಸುಧಾರಿಸುವ ಬಜೆಟ್ ಆಗಿದೆ. ಯುವಕರಿಗಾಗಿ ಅನೇಕ ಯೋಜನೆಗಳನ್ನು ಜಾರಿಗೆ ತಂದು ಯುವ ವಲಯಕ್ಕೂ ಆದ್ಯತೆ ನೀಡಿದ್ದು ಸ್ವಾಗತಾರ್ಹ.

– ಎಂ.ಎಂ. ಹಿರೇಮಠ. **ಬಿಜೆಪಿ ಜಿಲ್ಲಾ ವಕ್ತಾರ.**

## ಬೀದಿ ಬದಿ ವ್ಯಾಪಾರಿಗಳಿಗೆ ನಿರಾಸೆ



ಕೇಂದ್ರ ಸರಕಾರದ ವಿತ್ತ ಸಚಿವರಾದ ನಿರ್ಮಲಾ ಸೀತಾರಾಮನ್ ಅವರು ಶನಿವಾರ 2025-26ನೇ ಸಾಲಿನ ಬಜೆಟ್ ಮಂಡಿಸಿದದ್ದಾರೆ. ಆದರೆ, ಬಜೆಟ್‌ನಲ್ಲಿ ಬಡ ಬೀದಿ ಬದಿ ವ್ಯಾಪಾರಿಗಳಿಗೆ ಯಾವುದೇ ಉತ್ತೇಜನ ನೀಡಿಲ್ಲ, ಈ ಬಜೆಟ್‌ನಿಂದ ಬೀದಿ ಬದಿ ವ್ಯಾಪಾರಿಗಳಿಗೆ ಯಾವುದೇ ಪ್ರಯೋಜನ ಆಗುವುದಿಲ್ಲ.

– ಅನ್ವರ ಶಿರಹಟ್ಟಿ. **ಪಟ್ಟಣ ವ್ಯಾಪಾರ ಸಮಿತಿ ಸದಸ್ಯರು**

## ಮಧ್ಯಮ ವರ್ಗದವರ ಪರ ಬಜೆಟ್



ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿರುವ 2025-26ನೇ ಸಾಲಿನ ಬಜೆಟ್‌ನಲ್ಲಿ ಕಿಸಾನ್ ಕ್ರೆಡಿಟ್ ಸಾಲದ ಮಿತಿ 3ರಿಂದ 5 ಲಕ್ಷಕ್ಕೆ ಹೆಚ್ಚಳ ಮಾಡಿದ್ದು ರೈತರಿಗೆ ಅನುಕೂಲವಾಗಲಿದೆ.

– ಶಿವರಾಜಗೌಡ ಹಿರೇಮನಿಪಾಟೀಲ.
**ಬಿಜೆಪಿ ಯುವ ಮೋರ್ಚಾ ನಿಕಟಪೂರ್ವ ಜಿಲ್ಲಾಧ್ಯಕ್ಷ.**

## ಮಧ್ಯಮ ವರ್ಗದವರಿಕೆ ಪೂರಕ ಬಜೆಟ್

■ವಿಜಯಸಾಕ್ಷಿ ಸುದ್ದಿ, ಗದಗ



ಈ ಬಾರಿಯ ಬಜೆಟ್‌ನಲ್ಲಿ ಹಲವು ಜಿಲ್ಲೆಗಳಲ್ಲಿ ಧನ-ಧಾನ್ಯ ಯೋಜನೆ, ಮೀನುಗಾರ ವಲಯಕ್ಕೆ 60 ಸಾವಿರ ಕೋಟಿ ಅನುದಾನ, ಎಸ್.ಸಿ-ಎಸ್.ಟಿ ಉದ್ಯಮಿಗಳಿಗೆ 2 ಕೋಟಿ ರೂ.ವರೆಗೂ ಸಾಲಕ್ಕೆ ಅನುದಾನ, ನವಜಾತ ಶಿಶು ಮತ್ತು ತಾಯಿಗೆ ಪೌಷ್ಠಿಕ ಆಹಾರ, ಸರಕಾರಿ ಪ್ರೌಢಶಾಲೆಗಳಿಗೆ ಇಚಿಟರ್‌ನೆಟ್ ಸೌಲಭ್ಯ, 50 ಕೋಟಿ ಸರಕಾರಿ ಶಾಲೆಗಳಲ್ಲಿ ಅಟಲ್ ಠಿಂಕ ಯೋಜನೆ ಜಾರಿ, ಎಲ್ಲ ಜಿಲ್ಲಾ ಆಸ್ಪತ್ರೆಗಳಲ್ಲಿ ಕ್ಯಾನ್ಸರ್ ಸೆಂಟರ್ ಪ್ರಾರಂಭ, ಬೀದಿಬದಿ ವ್ಯಾಪಾರಿಗಳಿಗೆ ಸಾಲ ಸೌಲಭ್ಯ, ನಗರಾಭಿವೃದ್ಧಿಗೆ ವಿಶೇಷ ಅನುದಾನ...ಹೀಗೆ ರೈತರಿಗೆ, ಯುವಕರಿಗೆ ಹೆಚ್ಚಿನ ಒತ್ತು ನೀಡಿರುವದು ಹಾಗು ಬಲಿಷ್ಠ ರಾಷ್ಟ್ರ ನಿರ್ಮಾಣಕ್ಕಾಗಿ ಪ್ರಗತಿಯತ್ತ ಸಾಗಲು ಹಲವಾರು ಯೋಜನೆಗಳನ್ನು ತಂದಿರುವದು ಶ್ಲಾಘನೀಯ.

– **ರಾಜು ಕುರುಡಗಿ.** ಬಿಜೆಪಿ ಜಿಲ್ಲಾಧ್ಯಕ್ಷರು.

### ಓಪಿಎಸ್ ಜಾರಿಗೆ ಸರಕಾರದ ಮೇಲೆ ಒತ್ತಡ ತರುವಂತೆ ಶಾಸಕರಿಗೆ ಮನವಿ

# ಮಾರಕ ಯೋಜನೆ ಎನ್‌ಪಿಎಸ್ ಕೈಬಿಡಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ನಿವೃತ್ತಿಯ ಸಂಧ್ಯಾ ಕಾಲದಲ್ಲಿ ಸರ್ಕಾರಿ ನೌಕರರಿಗೆ ಸಿಗಬೇಕಾಗಿದ್ದ ಹಳೆಯ ನಿವೃತ್ತಿ ವೇತನ ವ್ಯವಸ್ಥೆ ಮರುಸ್ಥಾಪನೆ ಆಗಬೇಕು. ಎನ್‌ಪಿಎಸ್‌ನಂತಹ ಮಾರಕ ಯೋಜನೆಯನ್ನು ನಿಲ್ಲಿಸಬೇಕು. ಈ ಬಗ್ಗೆ ಕಾಂಗ್ರೆಸ್ ನೇತೃತ್ವದ ಸರಕಾರದ ಮೇಲೆ ಒತ್ತಡ ತರಬೇಕು ಎಂದು ಎನ್‌ಪಿಎಸ್ ನೌಕರರ ಸಂಘ ಪಟ್ಟಣದಲ್ಲಿ ಶನಿವಾರ ಶಾಸಕ ಡಾ. ಚಂದ್ರು ಲಮಾಣಿ ಅವರಿಗೆ ಮನವಿ ಅರ್ಪಿಸಿದರು.

▸▸3ನೇ ಪುಟಕ್ಕೆ



ಪಕ್ಷದ ಪ್ರಣಾಳಿಕೆಯಲ್ಲಿ ಸೇರಿಸಿದ 2006ರ ನಂತರ ಸೇವೆಗೆ ಸೇರಿದ ಸರ್ಕಾರಿ ಅನುದಾನಿತ ಹಾಗೂ ನಿಗಮ ಮಂಡಳಿ ನೌಕರರಿಗೆ ತಕ್ಷಣವೇ ಹಳೆ ಪಿಂಚಣಿ ವ್ಯವಸ್ಥೆಯನ್ನು ಜಾರಿಗೆ ಮಾಡಲು ಸಚಿವ ಸಂಪುಟದಲ್ಲಿ ನಿರ್ಧಾರ ಹಾಗೂ ಮುಂಬರುವ ವಿಧಾನಸಭಾ ಅಧಿವೇಶನದಲ್ಲಿ ಪ್ರಶ್ನೆ ಮಾಡಿ ಸರ್ಕಾರಕ್ಕೆ ಒತ್ತಾಯಿಸಬೇಕು ಎಂದು ಎನ್‌ಪಿಎಸ್ ಸಂಘದ ಅಧ್ಯಕ್ಷ ಎಫ್.ಎಸ್. ತಳವಾರ ಮನವಿ ಪತ್ರ ಸಲ್ಲಿಸಿದರು.

### ಅಡುಗೆ ಸಿಬ್ಬಂದಿಗಳಿಗೆ ಹಮ್ಮಿಕೊಂಡಿದ್ದ ಕಾರ್ಯಾಗಾರದಲ್ಲಿ ಶಾಸಕ ಡಾ. ಚಂದ್ರು ಲಮಾಣಿ

# ಆರೋಗ್ಯದತ್ತ ಗಮನ ನೀಡಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಾಲಾ ಮಕ್ಕಳ ಬಿಸಿಯೂಟ ಸಿದ್ಧಪಡಿಸುವ ಅಡುಗೆ ಸಿಬ್ಬಂದಿಗಳು ರುಚಿ-ಶುಚಿ, ಸ್ವಚ್ಛತೆಯೊಂದಿಗೆ ಮಕ್ಕಳ ಆರೋಗ್ಯ ಕಾಪಾಡುವ ಜವಾಬ್ದಾರಿಯನ್ನು ಪ್ರಾಮಾಣಿಕತೆಯಿಂದ ನಿರ್ವಹಿಸಬೇಕೆಂದು ಶಾಸಕ ಚಂದ್ರು ಲಮಾಣಿ ಹೇಳಿದರು.

ಅವರು ಶನಿವಾರ ಪಟ್ಟಣದ ಪಿಎಸ್‌ಬಿಡಿ ಶಾಲೆಯ ಸಭಾಂಗಣದಲ್ಲಿ ಜಿ.ಪಂ, ತಾ.ಪಂ ಹಾಗೂ ಲಕ್ಷ್ಮೇಶ್ವರ ಶಾಲಾ ಶಿಕ್ಷಣ ಇಲಾಖೆಯ ಆಶ್ರಯದಲ್ಲಿ ಪ್ರಧಾನಮಂತ್ರಿ ಪೋಷಣ ಶಕ್ತಿ ನಿರ್ಮಾಣ ಯೋಜನೆಯಡಿಯಲ್ಲಿ ಅಡುಗೆ ಸಿಬ್ಬಂದಿಗಳಿಗೆ ಹಮ್ಮಿಕೊಂಡಿದ್ದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

▸▸2ನೇ ಪುಟಕ್ಕೆ

ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಹನಮಂತಗೌಡ ರಾಮನಗೌಡ್ರ ಮಾತನಾಡಿ, ಶಾಲಾ ಮಕ್ಕಳಿಗೆ ಅಡುಗೆ ಸಿದ್ಧಪಡಿಸುವ ಈ ಕಾರ್ಯವನ್ನು ಅರ್ಪಣಾಮನೋಭಾವದಿಂದ ನಿರ್ವಹಿಸಬೇಕು. ಶಾಲೆಯ ಮಕ್ಕಳನ್ನು ನಿಮ್ಮ ಮಕ್ಕಳಂತೆ, ಶಾಲೆಯ ಅಡುಗೆ ಕೋಣೆಯನ್ನು ನಿಮ್ಮ ದೇವರ ಮನೆಯಂತೆ ಕಾಪಾಡಿಕೊಳ್ಳಬೇಕು. ನಿಮ್ಮ ಆರೋಗ್ಯವೇ ಮಕ್ಕಳ ಆರೋಗ್ಯವಾಗಿದ್ದು, ಎಲ್ಲ ನಿಯಮಗಳ ಪಾಲನೆಯೊಂದಿಗೆ ಕರ್ತವ್ಯ ನಿರ್ವಹಿಸಬೇಕು ಎಂದರು.

### ಪತ್ರಿಕಾಗೋಷ್ಠಿಯಲ್ಲಿ ಶ್ರೀಮಠದ ಟ್ರಸ್ಟಿನ ಗೌರವಾಧ್ಯಕ್ಷ ಡಿ.ಆರ್. ಪಾಟೀಲ ಮಾಹಿತಿ

# ಫೆ.5ರಂದು ಗದುಗಿಗೆ ಶ್ರೀ ಸಿದ್ಧಾರೂಢರ ಜ್ಯೋತಿ ಯಾತ್ರೆ

■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಸಿದ್ಧಾರೂಢರ 190ನೇ ಜಯಂತಿ, ಶ್ರೀ ಗುರುನಾಥಾರೂಢರ 115ನೇ ಜಯಂತಿ ಹಾಗೂ ಶ್ರೀ 'ಸಿದ್ಧಾರೂಢ ಕಥಾಮೃತ' ಗ್ರಂಥದ ಶತಮಾನೋತ್ಸವದ ನಿಮಿತ್ತ ಸಂಚರಿಸುತ್ತಿರುವ ಜ.ಶ್ರೀ ಸಿದ್ಧಾರೂಢ ಜ್ಯೋತಿ ರಥಯಾತ್ರೆ ಫೆ. 5ರಂದು ಗದಗ ನಗರಕ್ಕೆ ಆಗಮಿಸಲಿದೆ ಎಂದು ಮಾಜಿ ಶಾಸಕ ಹಾಗೂ ಶ್ರೀಮಠದ ಟ್ರಸ್ಟಿನ ಗೌರವಾಧ್ಯಕ್ಷ ಡಿ.ಆರ್. ಪಾಟೀಲ ತಿಳಿಸಿದರು.

ಶನಿವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ಸಿದ್ಧಾರೂಢರ ಜನ್ಮಸ್ಥಳ ಚಳಕಾಪುರದಿಂದ




2024 ಡಿಸೆಂಬರ್ 12ರಿಂದ ಜ್ಯೋತಿ ಯಾತ್ರೆ ಆರಂಭವಾಗಿದೆ. ಕರ್ನಾಟಕ ಮಾತ್ರವಲ್ಲದೇ ಗೋವಾ, ಮಹಾರಾಷ್ಟ್ರದಲ್ಲೂ ಸಂಚರಿಸಿದೆ. ಸದ್ಯ ಫೆ. 4ರಂದ ಹುಲಕೋಟಿ ಹಾಗೂ ಫೆ. 5ರಂದು ಸಂಜೆ 5 ಗಂಟೆಗೆ ತೋಂಟದಾರ್ಯ ಮಠದ ಆವರಣಕ್ಕೆ ಆಗಮಿಸಲಿದೆ ಎಂದರು.

ಸಿದ್ಧಾರೂಢರ ಜ್ಯೋತಿ ಯಾತ್ರೆ ನಗರದ ಪ್ರಮುಖ ಬೀದಿಗಳಲ್ಲಿ ಸಾಗಿ, ನೀಲಮ್ಮತಾಯಿ ಆಶ್ರಮದಿಂದ ಶಿವಾನಂದ ಮಠದ ವರೆಗೆ ಸಾಗಲಿದೆ. ಅಲ್ಲಿ ಅಭಿನವ ಶಿವಾನಂದ ಶ್ರೀಗಳ ಸಾನ್ನಿಧ್ಯದಲ್ಲಿ ಸತ್ಸಂಗ ನಡೆಯಲಿದೆ. ಫೆ. 6ರಂದು ಜ್ಯೋತಿ ಯಾತ್ರೆ ಹಂಪಿಗೆ ಪ್ರಯಾಣ ಬೆಳೆಸಲಿದೆ ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ನಗರಸಭೆ ಪ್ರತಿಪಕ್ಷ ನಾಯಕ ಎಲ್.ಡಿ. ಚಂದಾವರಿ, ಕಾಂಗ್ರೆಸ್ ಮುಖಂಡರಾದ ಗುರಣ್ಣ ಬಳಗಾನೂರ, ಜೆ.ಕೆ. ಜಮಾದಾರ, ಅಶೋಕ ಮಂದಾಲಿ ಮುಂತಾದವರು ಉಪಸ್ಥಿತರಿದ್ದರು.

ಗದುಗಿನ ಶಿವಾನಂದ ಮಹಾಸ್ವಾಮಿಗಳು ಮತ್ತು ಹುಬ್ಬಳ್ಳಿಯ ಸಿದ್ಧಾರೂಢರು ಅದ್ವೈತ ಸಿದ್ಧಾಂತವನ್ನು ಬೋಧಿಸಿದರು. ಹೀಗಾಗಿ ಅವರ ಪಾದಸ್ಪರ್ಶವಾದ ಜಾಗದಲ್ಲಿ ಕೋಮು ಸೌಹಾರ್ದತೆ ಮನೆ ಮಾಡಿದೆ. ಕೇವಲ ಹಿಂದೂ-ಮುಸ್ಲಿಂ ಅಷ್ಟೇ ಅಲ್ಲದೆ, ಬ್ರಾಹ್ಮಣರಿಂದ ಹರಿಜನರವರೆಗೂ ಸಿದ್ಧಾರೂಢರಿಗೆ ಭಕ್ತರಿದ್ದಾರೆ. ಈ ಪರಂಪರೆ ಮುಂದುವರೆಯಬೇಕು. ಅಂದಾಗ ಮಾತ್ರ ಸಮಾಜದಲ್ಲಿ ಶಾಂತಿ ನೆಲೆಸಲು ಸಾಧ್ಯ. ಈ ನಿಟ್ಟಿನಲ್ಲಿ ಸಿದ್ಧಾರೂಢರ ಜ್ಯೋತಿ ರಥಯಾತ್ರೆ ಸರ್ವಧರ್ಮಗಳ ಭಕ್ತರನ್ನು ಒಳಗೊಂಡಿದೆ ಎಂದು ತಿಳಿಸಿದರು.

## ಸಂಪಾದಕೀಯ

# ಮಧ್ಯಮ ವರ್ಗಕ್ಕೆ ಮಣೆ

ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಸತತ 8ನೇ ಬಾರಿಗೆ ಕೇಂದ್ರ ಬಜೆಟ್ ಮಂಡಿಸಿ ದಾಖಲೆಯನ್ನು ನಿರ್ಮಿಸಿದ್ದಾರೆ. ನಿರೀಕ್ಷೆಯಂತೆ ಈ ಬಾರಿಯೂ ಜನರ ನಿರೀಕ್ಷೆ ಸ್ವಲ್ಪ ಮಟ್ಟಿಗೆ ಹುಸಿಯಾಗಿದೆ. ಆದರೆ ಈ ಬಾರಿ ಮಧ್ಯಮ ವರ್ಗದ ಜನ ತೆರಿಗೆ ವಿನಾಯಿತಿ ಪಡೆದಿರುವುದು ಶುಭ ಸೂಚನೆ ನೀಡಿದೆ.

ದೇಶದ ಆರ್ಥಿಕತೆಯ ಬೆನ್ನೆಲುಬು ಆಗಿರುವ ಮಧ್ಯಮ ವರ್ಗದ ಜನ ಪಾವತಿಸುವಷ್ಟು ತೆರಿಗೆ ಮತ್ಯಾವ ವರ್ಗದ ಜನ ಪಾವತಿಸುವುದಿಲ್ಲ. ಈಗ ಆ ಮಧ್ಯಮ ವರ್ಗದ ಜನರಿಗೆ 12 ಲಕ್ಷ ರೂ. ಆದಾಯವರೆಗೂ ತೆರಿಗೆ ವಿನಾಯಿತಿ ನೀಡಲಾಗಿದೆ. ಇದು ಕೇವಲ ಆದಾಯ ಮಾತ್ರ ಅನ್ವಯಿಸುತ್ತದೆ. ಒಂದು ವೇಳೆ ಹೂಡಿಕೆಯಿಂದ ಲಾಭ ಗಳಿಸಿದ್ದರೆ ಅದು ಈ ತೆರಿಗೆ ವ್ಯಾಪ್ತಿಗೆ ಅನ್ವಯಿಸುವುದಿಲ್ಲ ಎನ್ನುವುದನ್ನು ಅರ್ಥ ಮಾಡಿಕೊಳ್ಳಬೇಕು.

ಇನ್ನು ಮಧ್ಯಮ ವರ್ಗದವರು ಕೊಳ್ಳುವ ಎಲೆಕ್ಟ್ರಾನಿಕ್ ವಸ್ತುಗಳ ಬೆಲೆ ಇಳಿಕೆ, ಬಂಡವಾಳ ಸರಕುಗಳ ಮೇಲಿನ ನೇರ ತೆರಿಗೆ ವಿನಾಯಿತಿ, ಸ್ಟಾರ್ಟ್ ಅಪ್ ಗಳಿಗೆ ತೆರಿಗೆ ವಿನಾಯಿತಿ, ದೇಶದ ಪ್ರತಿ ಜಿಲ್ಲಾ ಆಸ್ಪತ್ರೆಯಲ್ಲೂ ಕ್ಯಾನ್ಸರ್ ಚಿಕಿತ್ಸಾ ಘಟಕ ಸ್ಥಾಪನೆ ಕ್ರಾಂತಿಕಾರಕ ಘೋಷಣೆ ಎನ್ನುಬಹುದು. ಅದೇ ರೀತಿ ಜೀವ ಉಳಿಸುವ 26 ಔಷಧಗಳ ಸುಂಕ ಸಂಪೂರ್ಣ ಮನ್ನಾ ಮಾಡಿರುವುದು ಬಡ ಮತ್ತು ಮಧ್ಯಮ ವರ್ಗದ ಜನರಿಗೆ ಅನುಕೂಲಕರವೇ ಆಗಲಿವೆ.

ಇನ್ನು ಗರ್ಭಿಣಿ, ಬಾಣಂತಿಯರಿಗೆ, ಉದ್ಯೋಗ, ಕೈಗಾರಿಕೆ, ಸಣ್ಣ ಕೈಗಾರಿಕೆ ಸ್ಥಾಪನೆಗೆ ಉತ್ತೇಜನ ನೀಡುವ ಕಾರ್ಯಕ್ರಮಗಳು ಉತ್ತಮವಾಗಿವೆ. ಆದರೆ ಅವುಗಳ ಜಾರಿ ಸಮರ್ಪಕವಾಗಿ ಆದರೆ ಮಾತ್ರ ಅಂಥ ಘೋಷಣೆಗಳಿಗೆ ಅರ್ಥ ಬರುತ್ತದೆ. ಒಟ್ಟಾರೆ ಮಧ್ಯಮ ವರ್ಗದ ಜನರ ಕಲ್ಯಾಣ ಬಯಸಿ ಮಂಡಿಸಿದ ಬಜೆಟ್, ಖಾಸಗಿ ನೌಕರ ವರ್ಗದ ಜನರಿಗೆ ನೆಮ್ಮದಿ ತರುವಂತಾಗಿದೆ.

# ನಂದಿನಿ ಉತ್ಪನ್ನಗಳಿಂದ ಉತ್ತಮ ಆರೋಗ್ಯ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ನಂದಿನಿ ಹಾಲು ಸೇರಿ ನಂದಿನಿ ಉತ್ಪನ್ನಗಳು ಮಕ್ಕಳು, ರೋಗಿಗಳು ಸೇರಿ ಎಲ್ಲ ವಯೋಮಾನದವರ ಆರೋಗ್ಯಕ್ಕೆ ಉತ್ತಮವಾಗಿದ್ದು, ಇದರಿಂದ ರೈತರ ಹಿತಾಭಿವೃದ್ಧಿಯನ್ನೂ ಕಾಪಾಡಿದಂತಾಗುತ್ತದೆ ಎಂದು ಶಾಸಕ ಡಾ.ಚಂದ್ರು ಲಮಾಣಿ ಹೇಳಿದರು.

ಅವರು ಶನಿವಾರ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ನಂದಿನಿ ಕ್ಷೀರ ಕೇಂದ್ರ ಉದ್ಘಾಟಿಸಿ ಮಾತನಾಡಿ, ಆಸ್ಪತ್ರೆಯಲ್ಲಿ ನಂದಿನಿ ಹಾಲು ಸೇರಿ ಇತರೇ ಉತ್ಪನ್ನ ಮಾರಾಟಕ್ಕೆ ವ್ಯವಸ್ಥೆ ಕಲ್ಪಿಸಲಾಗಿದ್ದು, ರೋಗಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು. ನಿರ್ವಹಣೆ ಮಾಡುವವರು ಸ್ವಚ್ಛತೆ, ಶುಚಿತ್ವ ಕಾಪಾಡುವದರೊಂದಿಗೆ ಉತ್ತಮ ಸೇವೆ ನೀಡಬೇಕು ಎಂದರು.



ಈ ವೇಳೆ ಕೆಎಂಎಫ್ ಅಧ್ಯಕ್ಷ ಶಂಕರ ಮುಗದ, ನಿರ್ದೇಶಕರಾದ ಲಿಂಗರಾಜಗೌಡ ಪಾಟೀಲ ನಂದಿನಿ ಉತ್ಪನ್ನಗಳನ್ನು ಪ್ರದರ್ಶಿಸಿ ಮಾತನಾಡಿ, ಪರಿಶುದ್ಧವಾದ ನಂದಿನಿ ಉತ್ಪನ್ನಗಳನ್ನು ಬಳಸುವುದರಿಂದ ಆರೋಗ್ಯಕರ ಸಮಾಜ ನಿರ್ಮಾಣದೊಂದಿಗೆ ಹೈನುಗಾರಿಕೆ ಉತ್ತೇಜಿಸಿದಂತಾಗಿ ರೈತರ ಶ್ರೇಯೋಭಿವೃದ್ಧಿಗೂ ಕೈ ಜೋಡಿಸಿದಂತಾಗುತ್ತದೆ. ರೈತರಿಂದ ನೇರವಾಗಿ ಹಾಲು ಖರೀದಿಸಿ ಯಾವುದೇ ಕಲಬೆರಕೆ ಇಲ್ಲದೇ ಪರಿಶುದ್ಧವಾದ ಉತ್ಪನ್ನಗಳನ್ನು ಕೆಎಂಎಫ್ ಜನತೆಗೆ ನೀಡುತ್ತದೆ. ನಂದಿನಿ ಗುಣಮಟ್ಟದಿಂದ ದೇಶಾದ್ಯಂತ ಉತ್ಪನ್ನಗಳಿಗೆ ಬೇಡಿಕೆ ಹೆಚ್ಚುತ್ತಿರುವುದು ಕರ್ನಾಟಕದ ಹೆಮ್ಮೆಯಾಗಿದೆ ಎಂದರು.

ಈ ವೇಳೆ ಕೆಎಂಎಫ್ ವ್ಯವಸ್ಥಾಪಕ ನಿರ್ದೇಶಕ ಡಾ. ವಿರೇಶ ತರಲಿ, ಜಂಟಿ ನಿರ್ದೇಶಕ ಡಾ. ಷಣ್ಮುಕಯ್ಯ ಶಿರೋಳ, ಡಾ. ರಾಕೇಶ ತಲ್ಲೂರ, ಡಾ. ಪ್ರಸನ್ನ ಪಟ್ಟೇದ, ಡಾ. ಶ್ರೀಕಾಂತ ಕಾಟೇವಾಲೆ, ಬಿಜೆಪಿ ನಗರ ಘಟಕಾಧ್ಯಕ್ಷ ನವೀನ ಬೆಳ್ಳಟ್ಟಿ, ವಿಜಯ ಮೆಕ್ಕಿ, ಬಸವರಾಜ ಚಕ್ರಸಾಲಿ, ಗಿರೀಶ ಚೌರಡ್ಡಿ, ನಂದಿನಿ ಕೇಂದ್ರದ ಸೋಹಿಲ್ ರಿತ್ತಿ ಸೇರಿ ಆರೋಗ್ಯ ಇಲಾಖೆ ಸಿಬ್ಬಂದಿಗಳು, ರೋಗಿಗಳು ಇದ್ದರು.

# ಮುಸ್ಲಿಂ ಮಹಾಸಭಾದ ಜಿಲ್ಲಾ ಉಪಾಧ್ಯಕ್ಷರ ನೇಮಕ

**■ವಿಜಯಸಾಕ್ಷಿ ಸುದ್ದಿ, ಗದಗ**



ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾದ ಗದಗ ಜಿಲ್ಲಾ ಯುವ ಘಟಕದ ಉಪಾಧ್ಯಕ್ಷರನ್ನಾಗಿ ಇಂಜಿನಿಯರ್ ಪದವೀಧರರಾದ ಅಪ್ಜಲ್ ಮನಿಯಾರ ಇವರನ್ನು ರಾಜ್ಯಾಧ್ಯಕ್ಷ ಮಹ್ಮದಶಫಿವುದ್ದೀನ ಎಸ್. ನಾಗರಕಟ್ಟಿರವರ ಆದೇಶದ ಮೇರೆಗೆ ಗದಗ ಜಿಲ್ಲಾ ಯುವ ಘಟಕದ ಅಧ್ಯಕ್ಷ ಯಾಸಿನ್ ಮುಲ್ಲಾ ಇವರು ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

ಶ್ರೀಯುತರು ಗದಗ ಜಿಲ್ಲೆಯಲ್ಲಿರುವ ಮುಸ್ಲಿಂ ಸಮುದಾಯದ ಯುವಕರನ್ನು ಸಂಘಟಿಸಿ, ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಮತ್ತು ರಾಜಕೀಯವಾಗಿ ಸಮಾಜದ ಮುಖ್ಯವಾಹಿನಿಗೆ ತರುವಲ್ಲಿ ಶ್ರಮ ವಹಿಸಬೇಕೆಂದು ಆದೇಶಿಸಿದ್ದಾರೆ. ಮುಂಬರುವ ದಿನಮಾನದಲ್ಲಿ ಮುಸ್ಲಿಂ ಸಮುದಾಯದ ಯುವಕರ ಭವಿಷ್ಯವು ಉಜ್ವಲವಾಗುವಲ್ಲಿ ಮತ್ತು ದೇಶದ ಪ್ರಗತಿಯಲ್ಲಿ ಪ್ರಮುಖ ಪಾತ್ರ ವಹಿಸುವಂತೆ ಮಾಡಲು ಕಾರ್ಯಪ್ರವೃತ್ತರಾಗಬೇಕೆಂದು ಆಶಿಸಿದ್ದಾರೆ.

# ಮಧ್ಯಮ ವರ್ಗಕ್ಕೆ ಸರ್‌ಪ್ರೈಸ್ ಗಿಫ್ಟ್ : ಬಸವರಾಜ ಬೊಮ್ಮಾಯಿ

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಕೇಂದ್ರದ ಬಜೆಟ್‌ನಲ್ಲಿ ಮಧ್ಯಮ ವರ್ಗಕ್ಕೆ ಸರ್ ಪ್ರೈಸ್ ಗಿಫ್ಟ್ ಕೊಟ್ಟಿದ್ದು, ಇದರಿಂದ ಮಧ್ಯಮ ವರ್ಗದವರ ಉಳಿತಾಯ ಹೆಚ್ಚಲಿದೆ. ಇದೊಂದು ಆರ್ಥಿಕ ಮತ್ತು ಸಾಮಾಜಿಕ ವಲಯದಲ್ಲಿ ಸಮತೋಲನ ಕಾಯ್ದುಕೊಂಡಿರುವ ಬಜೆಟ್ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅಭಿಪ್ರಾಯ ಪಟ್ಟಿದ್ದಾರೆ.

ಕೇಂದ್ರದ ಬಜೆಟ್ ಮಂಡನೆ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಇದೊಂದು ದೂರದೃಷ್ಟಿಯ ವಿಕಸಿತ ಭಾರತ 2047 ರ ಅಡಿಗೆ ತೆಗೆದುಕೊಂಡು ಹೋಗುವ ಅಭಿವೃದ್ಧಿ ಪರವಾಗಿರುವ ಬಜೆಟ್. ಆರ್ಥಿಕ ಮತ್ತು ಸಾಮಾಜಿಕ ಪರಿಸ್ಥಿತಿಗೆ ಸಮತೋಲನ ತೆಗೆದುಕೊಂಡು ಹೋಗುವ ಬಜೆಟ್. ಆತ್ಮನಿರ್ಭರ ಮಾಡುವ ಪ್ರಧಾನಿ ನರೇಂದ್ರ ಮೋದಿಯವರ ಕನಸಿಗೆ ಪೂರಕವಾದ ಬಜೆಟ್ ಆಗಿದೆ ಎಂದು ಹೇಳಿದರು.



ಮಧ್ಯಮವರ್ಗದ ಜನರ ನಿರೀಕ್ಷೆಗಳಿಗೆ ಬೂಸ್ಟ್ ನೀಡಿದೆ. ಮಧ್ಯಮ ವರ್ಗದ ಉಳಿತಾಯ ಹೆಚ್ಚಿಸಿದೆ. ಇದೊಂದು ಮಧ್ಯಮ ವರ್ಗದವರಿಗೆ ಸರ್ಪ ರೈಸ್ ಗಿಫ್ಟ್. ಎಲ್ಲರೂ 10 ಲಕ್ಷ ತೆರಿಗೆ ವಿನಾಯಿತಿ ನಿರೀಕ್ಷೆ ಮಾಡಿದ್ದರು. ಆದರೆ, ಪಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು 12 ಲಕ್ಷದವರೆಗೆ ತೆರಿಗೆ ವಿನಾಯಿತಿ ನೀಡಿ ಸರ್ಪರೈಸ್ ಗಿಫ್ಟ್ ನೀಡಿದ್ದಾರೆ ಎಂದರು.

ಅಭಿವೃದ್ಧಿಯಲ್ಲಿ ಆರ್ಥಿಕ ಹಾಗೂ ಸಾಮಾಜಿಕ ವಲಯದಲ್ಲಿ ಸಮತೋಲನ ಕಾಯ್ದುಕೊಳ್ಳಲಾಗಿದೆ. ಬಡವರು. ರೈತರು, ಮಹಿಳೆಯರು, ಯುವಕರು, ಎಸ್ಸಿ ಎಸ್ಟಿ ಸಮುದಾಯಗಳಿಗೆ ಆದ್ಯತೆ ನೀಡಲಾಗಿದೆ. ದುಡಿಯುವ ಕೈಗಳಿಗೆ ವಿಪುಲವಾದಂತ ಅವಕಾಶ ಕೊಟ್ಟಿರುವ ಬಜೆಟ್. ತನ್ನದೇ ತಾಂತ್ರಿಕತೆಗೆ ಸಂಶೋಧನೆಗೆ ವಿಶೇಷವಾಗಿ ಕೃಷಿಯನ್ನು ಆತ್ಮ ನಿರ್ಭರ ಮಾಡುವ ಬಜೆಟ್. ಯೂರಿಯಾ ಗೊಬ್ಬರ, ಬೀಜ, ಉತ್ಪಾದನೆಯಲ್ಲಿ ನಾವು ಸಂಪೂರ್ಣವಾಗಿ ಆತ್ಮನಿರ್ಭರವಾಗಲು ಅವಕಾಶ ನೀಡಲಾಗಿದೆ. ಹಳ್ಳಿಗಾಡಿನಲ್ಲಿ ಸ್ವಯಂ ಉದ್ಯೋಗವಕಾಶ, ಹಳ್ಳಿಗಳಿಂದ ಶಹರಕ್ಕೆ ಹೋಗುವುದನ್ನು ತಡೆಯಲಯ ಕ್ರಮ. ರೈಲ್ವೆ, ರಸ್ತೆ ನಿರ್ಮಾಣಕ್ಕೆ ಹೆಚ್ಚಿನ ಬಂಡವಾಳ ಹರಿದು ಬರುತ್ತಿದೆ. ಆರೋಗ್ಯ ಮತ್ತು ಶಿಕ್ಷಣಕ್ಕೆ ಆದ್ಯತೆ ನೀಡಲಾಗಿದೆ. ಆರೋಗ್ಯ ವಲಯದಲ್ಲಿ ಕ್ಯಾನ್ಸರ್ ನಿಯಂತ್ರಣಕ್ಕೆ ಹೆಚ್ಚಿನ ಆದ್ಯತೆ ನೀಡಿದೆ ಎಂದರು.

# ಇಂದಿನ ನೀರು ಪೂರೈಕೆ ವಿವರ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ–ಬೆಟಗೇರಿ ಅವಳಿ ನಗರದಲ್ಲಿ ಫೆಬ್ರವರಿ–02 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 16 – ಹೊಂಬಳ ನಾಕಾ, ಜನತಾ ಕಾಲೋನಿ, ಡೋರಗಲ್ಲಿ ಪೂರ್ತಿ ಭಾಗಗಳು. ವಾರ್ಡ್ ನಂ. 16, 21– ರಹಮತ್ ನಗರ 4 ಭಾಗಗಳು, ಗುಡದೂರ ಸ್ವಾಮಿ ಎಡಭಾಗ ಬಲಭಾಗ, ಕುಂಬೇಶ್ವರ ನಗರದ 4 ಭಾಗಗಳು ಉಳಿದ ಕೆಲವು ಭಾಗಗಳು. ವಾರ್ಡ್ ನಂ. 35 – ಧೋಬಿ ಘಾಟ್. ವಾರ್ಡ್ ನಂ. 30, 34 – 1, 2, 3ನೇ ಕ್ರಾಸ್‌ಗಳು, ಶಿವಾನಂದ ಗಾರ್ಡನ್, ಹನುಮಂತ ದೇವರ ಗುಡಿ, ಸಚ್ಚಿದಾನಂದ ಮಠ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 12, 13, 28 – ಆನಂದ ಕಾರ್ಕಳ, ಗಣಪತಿ ಗುಡಿ ಹಿಂದಿನ ಭಾಗ, ಅಗಸರ ಲೈನ್, ಟೋಪಿಯವರ ಲೈನ್, ಜಾಧವ್ ಅವರ ಲೈನ್, ಮುಧೋಳ ಅವರ ಲೈನ್, ಪೊಲೀಸ್ ಪಾಟೀಲ, ಗೋಡಬೋಲೆ ಡಾಕ್ಟರ್ ಲೈನ್, ಪಟ್ಟಣ ಶೆಟ್ಟಿಯವರ ಲೈನ್, ಅಂಗಡಿಯವರ ಲೈನ್, ಜೆ ಟಿ ಕಾಲೇಜ್ ರಸ್ತೆ, ಅರಸಿದ್ದಿಯವರ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 6 – ಎಸ್ ಬಿ ನಗರ 2 ಭಾಗಗಳು ಉಳಿದ ಕೆಲವು ಭಾಗಗಳು. ವಾರ್ಡ್ ನಂ. 4 – ಕಣವಿ ಪ್ಲಾಟ್, ಟರ್ನಲ್ ಪೇಟೆ, ಗೌರಿ ಗುಡಿ, ಬಿಎಸ್ ಎನ್ ಎಲ್ ಆಫೀಸ್, ಸುಣ್ಣದ ಭಟ್ಟಿ, ಮಾಂಡ್ರೆ ಲೈನ್, 275 ಮನೆ, 200 ಮನೆ, ಕಮಾನ ಲೈನ್, ಮಂಜುನಾಥ ನಗರ, ಕುಲಮಿ ಲೈನ್, ಸ್ವಾಗತ ಹೊಟೇಲ್ ಲೈನ್, ಕೋಮಲ ಹೋಟೆಲ್, ಹುಯಿಲಗೋಳ ರಸ್ತೆ ಬಲಭಾಗ ಉಳಿದ ಕೆಲವು ಭಾಗಗಳು.

ಪ್ರಕಟಣೆ: ಗದಗ–ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

# ಪ್ರಾಮಾಣಿಕತೆಯಿಂದ ಅಭ್ಯಾಸದಲ್ಲಿ ತಲ್ಲೀನರಾಗಿ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಎಸ್‌ಎಸ್‌ಎಲ್‌ಸಿ ಫಲಿತಾಂಶ ಭವಿಷ್ಯದ ಶೈಕ್ಷಣಿಕ ಜೀವನಕ್ಕೆ ಮಾರ್ಗದರ್ಶಿಯಾಗಿದ್ದು, ಪರೀಕ್ಷೆ ಕಾಲ ಸಮೀಪಿಸುತ್ತಿದೆ. ವಿದ್ಯಾರ್ಥಿಗಳು ಸಮಯ ವ್ಯರ್ಥ ಮಾಡದೇ ಶ್ರದ್ಧೆ, ಪ್ರಾಮಾಣಿಕತೆಯಿಂದ ಅಭ್ಯಾಸದಲ್ಲಿ ತಲ್ಲೀನರಾಗಬೇಕು ಎಂದು ಬಿಆರ್‌ಪಿ ಈಶ್ವರ ಮೆಡ್ಲೇರಿ ಹೇಳಿದರು.

ಅವರು ಶುಕ್ರವಾರ ಪಟ್ಟಣದ ಪಿಎಸ್‌ಬಿಡಿ ಬಾಲಕಿಯರ ಪ್ರೌಢಶಾಲೆಯಲ್ಲಿ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗಾಗಿ ಹಮ್ಮಿಕೊಳ್ಳಲಾಗಿದ್ದ ಪಾಲಕರ ಸಭೆ ಹಾಗೂ ಓದಿನ ಮನೆ ಕಾರ್ಯಕ್ರಮದಲ್ಲಿ ಮಾತನಾಡಿ, ಶಿಕ್ಷಕರು ಪಾಠ ಮಾಡುವುದು ಎಷ್ಟು ಮುಖ್ಯವೋ, ವಿದ್ಯಾರ್ಥಿಗಳು ನಿರಂತರ ಓದಿ ಸಾಧನೆ ಮಾಡುವುದು ಅಷ್ಟೇ ಮುಖ್ಯ. ವಿದ್ಯಾರ್ಥಿಗಳು ತಮ್ಮಲ್ಲಿನ ಕೀಳರಿಮೆ ಬಿಟ್ಟು, ಋಣಾತ್ಮಕವಾಗಿ ಯೋಚಿಸದೇ ನಾನು ಮಾಡಬಲ್ಲೆ ಎಂಬ ಆತ್ಮವಿಶ್ವಾಸದಿಂದ ಅಭ್ಯಾಸದಲ್ಲಿ ತೊಡಗಿಸಿಕೊಳ್ಳಬೇಕು. ವಿದ್ಯಾರ್ಥಿಗಳು ಇಂಗ್ಲೀಷ್, ವಿಜ್ಞಾನ ಮತ್ತು ಗಣಿತವನ್ನು ಕಬ್ಬಿಣದ ಕಡಲೆ ಎಂದು ಭಾವಿಸದೇ ಹೆಚ್ಚಿನ ವೇಳೆಯನ್ನು ಈ ವಿಷಯಗಳಿಗೆ ಮೀಸಲಿರಿಸಿ ಶಿಕ್ಷಕರು ಮತ್ತು ಸಹಪಾಠಿಗಳೊಂದಿಗೆ ಚರ್ಚಿಸಿ ವಿಷಯ ಮನನ ಮಾಡಿಕೊಳ್ಳಬೇಕು. ಅದಕ್ಕಾಗಿ ಇಲಾಖೆಯೂ ಈಗಾಗಲೇ ಫಲಿತಾಂಶ ಸುಧಾರಣೆಗಾಗಿ ಅನೇಕ ಪೂರಕ ಕಾರ್ಯಯೋಜನೆಗಳನ್ನು ಮಾಡಿದೆ ಎಂದರು. ಸಂಸ್ಥೆಯ ಕಾರ್ಯದರ್ಶಿ ಜಯಲಕ್ಷ್ಮೀ ಗಡ್ಡದೇವರಮಠ ಮಾತನಾಡಿ, ಪ್ರತಿಯೊಬ್ಬ ಪಾಲಕರು ಮಕ್ಕಳ ಬಗ್ಗೆ ಸಾಕಷ್ಟು ಆಸೆ–ಕನಸು–ಭರವಸೆಗಳನ್ನಿಟ್ಟುಕೊಂಡಿರುತ್ತಾರೆ. ವಿದ್ಯಾರ್ಥಿಗಳಾದ ನೀವು ಹೆತ್ತವರ ಭರವಸೆಯ ಬೆಳಕಾಗಬೇಕು. ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸುವವರೆಗೂ ಶೈಕ್ಷಣಿಕ ಸಾಧನಗೆ ಅಡ್ಡಿಯಾಗಲಿರುವ ಮೊಬೈಲ್, ಟಿವಿ ಬಳಸುವುದಿಲ್ಲ ಎಂಬ ದೃಢ ಸಂಕಲ್ಪ ಮಾಡಿ ಎಂದರು.

ಸಂಸ್ಥೆಯ ಅಧ್ಯಕ್ಷರಾದ ಸುವರ್ಣ ಬಾಯಿ ಬಹದ್ದೂರ್ ದೇಸಾಯಿ, ಶಾರದಕ್ಕ ಮಹಾಂತಶೆಟ್ಟರ ಮುಖ್ಯೋಪಾಧ್ಯಾಯ ಜೆ.ಡಿ. ಲಮಾಣಿ, ಸಿಆರ್‌ಪಿ ಉಮೇಶ ನೇಕಾರ, ಎಂ.ಸಿ. ಹಿರೇಮಠ, ಪಿ.ಎಲ್. ಪಾಟೀಲ, ಎಸ್.ಎಸ್. ಮಠದ, ಎನ್.ಡಿ. ಗೌರಿ, ಎಸ್.ಎಂ. ಹಾದಿಮನಿ, ಕಾವ್ಯಾ ದೇಸಾಯಿ, ಶ್ವೇತಾ ಅಂಬಲಿ ಮುಂತಾದವರಿದ್ದರು.

## ನಿರ್ಮಲಾಬಾಯಿ ಕಬಾಡಿ ನಿಧನ: ನೇತ್ರದಾನ



**■ವಿಜಯಸಾಕ್ಷಿ ಸುದ್ದಿ, ಗದಗ**

ಬೆಟಗೇರಿಯ ಶರಣಬಸವೇಶ್ವರ ನಗರದ ನಿವಾಸಿ ಶ್ರೀಮತಿ ನಿರ್ಮಲಾಬಾಯಿ ಧರ್ಮಾಸಾ ಕಬಾಡಿ (79) ಗುರುವಾರ ನಿಧನರಾದರು. ಮೃತರ ಕುಟುಂಬದವರ ಒಪ್ಪಿಗೆಯ ಮೇರೆಗೆ ಮೃತರ ಕಣ್ಣುಗಳನ್ನು ದಾನ ಮಾಡಲು ಕ್ರಮ ಜರುಗಿಸಲಾಯಿತು. ಹುಬ್ಬಳ್ಳಿಯ ಎಂ.ಎಂ. ಜೋಷಿ ಆಸ್ಪತ್ರೆಯ ತಜ್ಞರ ತಂಡ ಆಗಮಿಸಿ ನೇತ್ರದಾನದ ಪ್ರಕ್ರಿಯೆಗಳನ್ನು ಕೈಗೊಂಡರು.

ಈ ಸಂದರ್ಭದಲ್ಲಿ ವೆಂಕಟೇಶ ಕಬಾಡಿ, ಗದಗ–ಬೆಟಗೇರಿ ಲಯನ್ಸ್ ಕ್ಲಬ್‌ನ ಅಧ್ಯಕ್ಷ ನಿತೀಶ್ ಸಾಲಿ, ವೆಂಕಟೇಶ ಬಾಕಳೆ, ರಮೇಶ ಶಿಗ್ಲಿ ಸೇರಿದಂತೆ ಕಬಾಡಿ ಕುಟುಂಬದವರು ಉಪಸ್ಥಿತರಿದ್ದರು.

# ಆರೋಗ್ಯದತ್ತ ಗಮನ ನೀಡಿ

▶▶ಮೊದಲನೇ ಪುಟದಿಂದ

ಸರ್ಕಾರದ ಮಹತ್ವಾಕಾಂಕ್ಷಿ ಬಿಸಿಯೂಟದ ಯೋಜನೆಯ ಯಶಸ್ವಿ ಅನುಷ್ಠಾನದ ಜತೆಗೆ ಆರೋಗ್ಯಕರ ಸಮಾಜ ನಿರ್ಮಾಣದಲ್ಲಿ ಬಿಸಿಯೂಟ ಸಿಬ್ಬಂದಿಗಳ ಪಾತ್ರ ಮಹತ್ವದ್ದಾಗಿದೆ. ಸದೃಢವಾದ ದೇಹದಲ್ಲಿ ಸದೃಢವಾದ ಮನಸ್ಸು ನೆಲೆಗೊಳ್ಳಲು ಸಾಧ್ಯ. ಈ ನಿಟ್ಟಿನಲ್ಲಿ ಪೌಷ್ಠಿಕ ಆಹಾರ ಸಿದ್ಧಪಡಿಸುವ ಮೂಲಕ ಆರೋಗ್ಯಕರ ಮಕ್ಕಳನ್ನು ಸಮಾಜಕ್ಕೆ ನೀಡುವ ಗುರುತರ ಜವಾಬ್ದಾರಿಯಿದೆ. ಅದಕ್ಕಾಗಿ ಅಡುಗೆ ಸಿಬ್ಬಂದಿಗಳೂ ತಮ್ಮ ಆರೋಗ್ಯದತ್ತ ಗಮನ ಹರಿಸಬೇಕು. ಅಡುಗೆ ಸಿಬ್ಬಂದಿಗಳ ನ್ಯಾಯಯುತ ಬೇಡಿಕೆಗಳ ಈಡೇರಿಕೆಗಾಗಿ ಸದಾ ಬೆಂಬಲಕ್ಕೆ ನಿಲ್ಲುವುದಾಗಿ ತಿಳಿಸಿದರು.

ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಹನಮಂತಗೌಡ ರಾಮನಗೌಡ್ರ ಮಾತನಾಡಿ, ಶಾಲಾ ಮಕ್ಕಳಿಗೆ ಅಡುಗೆ ಸಿದ್ಧಪಡಿಸುವ ಈ ಕಾರ್ಯವನ್ನು ಅರ್ಪಣಾಮನೋಭಾವದಿಂದ ನಿರ್ವಹಿಸಬೇಕು. ಶಾಲೆಯ ಮಕ್ಕಳನ್ನು ನಿಮ್ಮ ಮಕ್ಕಳಂತೆ, ಶಾಲೆಯ ಅಡುಗೆ ಕೋಣೆಯನ್ನು ನಿಮ್ಮ ದೇವರ ಮನೆಯಂತೆ ಕಾಪಾಡಿಕೊಳ್ಳಬೇಕು. ನಿಮ್ಮ ಆರೋಗ್ಯವೇ ಮಕ್ಕಳ ಆರೋಗ್ಯವಾಗಿದ್ದು, ಎಲ್ಲ ನಿಯಮಗಳ ಪಾಲನೆಯೊಂದಿಗೆ ಕರ್ತವ್ಯ ನಿರ್ವಹಿಸಬೇಕು ಎಂದರು.

ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಬಿಇಓ ನಾಣಕಿ ನಾಯಕ, ತರಬೇತಿ ಸಂಪನ್ಮೂಲ ಶಿಕ್ಷಕ ಎಸ್.ಕೆ. ಹವಾಲ್ದಾರ ಮಾತನಾಡಿದರು. ಈ ವೇಳೆ ಅಡುಗೆ ಸಿಬ್ಬಂದಿಗಳು ವೇತನ ಹೆಚ್ಚಳದ ಜೊತೆಗೆ ಶುದ್ಧ ನೀರು, ಶೌಚಾಲಯ, ಕೊಠಡಿ ಸೇರಿ ಅಗತ್ಯ ಸೌಲಭ್ಯ ಕಲ್ಪಿಸುವಂತೆ ಮನವಿ ಮಾಡಿದರು. ಅಗ್ನಿಶಾಮಕದಳ ಅಧಿಕಾರಿಗಳು ಹಾಗೂ ಸ್ಥಳೀಯ ಮೆಕ್ಕಿ ಗ್ಯಾಸ್ ಏಜೆನ್ಸಿ ಸಿಬ್ಬಂದಿಗಳು ಸಿಲಿಂಡರ್ ಸುರಕ್ಷತಾ ಕ್ರಮಗಳ ಬಗ್ಗೆ ತಿಳಿಸಿದರು.

ಅಗ್ನಿಶಾಮಕ ಠಾಣಾಧಿಕಾರಿ ಎಚ್.ಎಂ. ಕಡ್ಡಿಪೂಜಾರ, ಬಸವರಾಜ ಮರಟಗೇರಿ, ತೋಟಗಾರಿಕೆ ಇಲಾಖೆ ಶಿವಾನಂದ ಬಾನಿ, ಪಿಎಸ್‌ಬಿಡಿ ಮುಖ್ಯೋಪಾಧ್ಯಾಯ ಜೆ.ಡಿ. ಲಮಾಣಿ, ಮುಖ್ಯೋಪಾಧ್ಯಾಯ ಡಿ.ಎನ್. ದೊಡ್ಡಮನಿ, ಬಿ.ಎಸ್. ಹರ್ಲಾಪುರ, ಚಂದ್ರಕಾಂತ ನೇಕಾರ, ಜ್ಯೋತಿ ಗಾಯಕವಾಡ ಮುಂತಾದವರಿದ್ದರು.

## ಶ್ರೀ ವೀರಭದ್ರೇಶ್ವರ ಸ್ವಾಮಿ ಮಂದಿರದ ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಸದ್ಗುಣಗಳಿಂದ ಬದುಕು ಉಜ್ವಲ

**■ವಿಜಯಸಾಕ್ಷಿ ಸುದ್ದಿ, ಹೊನ್ನಾಳಿ**

ಈಶ ನಿರ್ಮಿತವಾದ ಈ ಪ್ರಪಂಚದಲ್ಲಿ ಇರುವುದೆಲ್ಲವೂ ಅಮೂಲ್ಯ ಸಂಪತ್ತು. ಚಿನ್ನವಿಲ್ಲದೇ ಬದುಕಬಹುದು. ಆದರೆ ಮಣ್ಣು ಇಲ್ಲದೇ ಬದುಕಲು ಸಾಧ್ಯವಾಗದು. ಸಂಪತ್ತು ಇಲ್ಲದಿದ್ದರೂ ಬದುಕಬಹುದು. ಸದ್ಗುಣ–ಸಚ್ಚಾರಿತ್ರ್ಯ ಇಲ್ಲದಿದ್ದರೆ ಬದುಕಿಗೆ ಬೆಲೆಯಿಲ್ಲ. ಸದ್ಗುಣಗಳಿಂದ ಬದುಕು ಉಜ್ವಲಗೊಳ್ಳುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ಮಾರಿಕೊಪ್ಪ ರಸ್ತೆಯಲ್ಲಿರುವ ಪೇಟೆ ಶ್ರೀ ವೀರಭದ್ರೇಶ್ವರ ಸ್ವಾಮಿ ಶಿಲಾಮಂದಿರ ಉದ್ಘಾಟನೆ, ಮೂರ್ತಿ ಪ್ರಾಣ ಪ್ರತಿಷ್ಠಾಪನೆ–ಕಳಸಾರೋಹಣ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯ ಜೀವನದಲ್ಲಿ ಧರ್ಮ, ಅರ್ಥ, ಕಾಮ ಮತ್ತು ಮೋಕ್ಷ ಎಂಬ ಚತುರ್ವಿಧ ಪುರುಷಾರ್ಥಗಳಲ್ಲಿ ಒಂದನ್ನಾದರೂ ಸಂಪಾದಿಸಿಕೊಳ್ಳದಿದ್ದರೆ ಜೀವನ ವ್ಯರ್ಥ. ಮನುಷ್ಯನಿಗೆ ಸಂಪತ್ತು, ಅದರಿಂದ ಅವನ ಇಷ್ಟಾರ್ಥಗಳನ್ನು ಅಷ್ಟೇ ಬಯಸುತ್ತಾನೆ. ಆದರೆ ಮೊದಲಿರುವ ಧರ್ಮ ಕೊನೆಗೆ ಇರುವ ಮೋಕ್ಷದ ಬಗ್ಗೆ ಚಿಂತನೆಯನ್ನೇ ಮಾಡುವುದಿಲ್ಲ. ಸುಖ, ಶಾಂತಿಯ ಬದುಕಿಗೆ ಧರ್ಮವೇ ಮೂಲ ಎಂಬುದನ್ನು ಮರೆಯಬಾರದು. ಜ್ಯೋತಿ ಉರಿದು ಬೆಳಕು ಕೊಡುವಂತೆ ಆಚಾರ್ಯರು, ಸಂತ ಶ್ರೇಷ್ಠರು ನಂದಾ ದೀಪದಂತಿದ್ದು ಬೆಳಕು ತೋರುತ್ತಾರೆ. ಸತ್ಕಾರ್ಯಗಳಿಂದ ಮನುಷ್ಯನ ಅಂತರಂಗ ಪರಿಶುದ್ಧವಾಗುತ್ತದೆ. ಸತ್ಯ ಶುದ್ಧ ಕಾಯಕದಿಂದ ಬದುಕು ಸುಂದರ ಸುಭದ್ರಗೊಳ್ಳುವುದೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಧರ್ಮ ಗ್ರಂಥದಲ್ಲಿ ನಿರೂಪಿಸಿದ್ದಾರೆ.



ದುಷ್ಟರ ಸಂಹಾರ ಶಿಷ್ಟರ ಸಂರಕ್ಷಣೆಗಾಗಿ ವೀರಭದ್ರಸ್ವಾಮಿ ಅವತರಿಸಿ ಬಂದಿದ್ದಾನೆ. ಪರಶಿವನ ಜಟಾ ಮುಕುಟದಿಂದ ಅವತರಿಸಿದ ಶ್ರೀ ವೀರಭದ್ರೇಶ್ವರ ಶಿವ ಶಕ್ತಿಯ ಮಹತ್ವವನ್ನು ಎತ್ತಿ ಹಿಡಿದ ಮಹಾದೈವ. ವೀರಶೈವರಷ್ಟೇ ಅಲ್ಲ, ಬೇರೆ ಬೇರೆ ಧರ್ಮದವರು ಸಹ ಶ್ರೀ ವೀರಭದ್ರಸ್ವಾಮಿಯನ್ನು ಆರಾಧಿಸುತ್ತಾರೆ. ಶ್ರೀ ರಂಭಾಪುರಿ ಪೀಠದ ಕ್ಷೇತ್ರನಾಥನಾಗಿ ಪೂಜೆಗೊಳ್ಳುವ ಶ್ರೀ ವೀರಭದ್ರಸ್ವಾಮಿ ಎಲ್ಲೆಡೆಯಲ್ಲಿ ನೆಲೆಗೊಂಡು ಭಕ್ತ ಸಂಕುಲವನ್ನು ಕಾಪಾಡುತ್ತಿದ್ದಾನೆ. ಹೊನ್ನಾಳಿ ಶ್ರೀ ವೀರಭದ್ರೇಶ್ವರ ಸ್ವಾಮಿ ದೇವಸ್ಥಾನವನ್ನು ಶಿಲಾಮಯದಿಂದ ನಿರ್ಮಿಸಿ ಇಂದು ಲೋಕಾರ್ಪಣೆ ಮಾಡುತ್ತಿರುವುದು ತಮಗೆ ಅತ್ಯಂತ ಸಂತೋಷವನ್ನು ತಂದಿದೆ ಎಂದರು.

ಶಾಸಕ ಡಿ.ಜಿ. ಶಾಂತನಗೌಡರು, ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು. ಬೆನಕಯ್ಯ ಶಾಸ್ತ್ರಿಗಳು ಹೊನ್ನಾಳಿ, ನಿಜಗುಣ ಶಿವಯೋಗಿ ಶಾಸ್ತ್ರಿಗಳು ಮತ್ತು ಪ್ರಕಾಶಯ್ಯ ಶಾಸ್ತ್ರಿಗಳು ಶ್ರೀ ವೀರಭದ್ರೇಶ್ವರ ಸ್ವಾಮಿಯ ಪ್ರತಿಷ್ಠಾಪನೆಯ ಎಲ್ಲಾ ವೈದಿಕ ಕಾರ್ಯಗಳನ್ನು ಯಶಸ್ವಿಯಾಗಿ ನೆರವೇರಿಸಿಕೊಟ್ಟರು.

ಹೂವಿನಹಡಗಲಿ ಪ್ರಕಾಶ ಸಂಗಡಿಗರು ಪ್ರಾರ್ಥನಾ ಗೀತೆ ಹಾಡಿದರು. ದೇವಸ್ಥಾನ ಸಮಿತಿ ಅಧ್ಯಕ್ಷ ಪಟ್ಟಣಶೆಟ್ಟಿ ಪರಮೇಶ ಸ್ವಾಗತಿಸಿದರು. ಹೆಚ್. ಆರ್. ಗಂಗಾಧರ ನಿರೂಪಿಸಿದರು.

ಸಮಾರಂಭಕ್ಕೂ ಮುನ್ನ ಶ್ರೀ ನೀಲಕಂಠೇಶ್ವರ ದೇವಸ್ಥಾನದಿಂದ ಶ್ರೀ ವೀರಭದ್ರೇಶ್ವರ ದೇವಸ್ಥಾನದ ವರೆಗೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರುಗಳನ್ನು ಸಾರೋಟದೊಂದಿಗೆ ಮೆರವಣಿಗೆ ಮಾಡಿ ಬರಮಾಡಿಕೊಂಡರು.

ನೇತೃತ್ವ ವಹಿಸಿದ ಹಿರೇಕಲ್ಮಠದ ಡಾ. ಒಡೆಯರ್ ಚನ್ನಮಲ್ಲಿಕಾರ್ಜುನ ಶಿವಾಚಾರ್ಯರು ಮಾತನಾಡಿ, ಭಾವನೆ ಒಳ್ಳೆಯದಿದ್ದರೆ ಭಾಗ್ಯ ಬೆನ್ನತ್ತಿ ಬರುತ್ತದೆ. ನಮ್ಮ ಜೀವನ ದೋಣಿಗೆ ನಾವೇ ನಾಯಕರು. ಸಜ್ಜನ ಸತ್ಪುರುಷರ ಸಂಗಮದಿಂದ ಬೆಳೆದು ಬಂದಾಗ ಬದುಕು ಉಜ್ವಲಗೊಳ್ಳುವುದು. ಶ್ರೀ ವೀರಭದ್ರನ ಶಕ್ತಿ ಅದ್ಭುತವಾದುದು. ದುಷ್ಟರನ್ನು ಸಂಹರಿಸಿ ಸಜ್ಜನರಿಗೆ ಒಳಿತು ಮಾಡಿದ ವೀರಭದ್ರ ನಮ್ಮೆಲ್ಲರ ಆರಾಧ್ಯ ದೈವವಾಗಿದ್ದಾನೆ ಎಂದರು.

# ಮಾಸಿಕ ಜ್ಞಾನಾಮೃತ ಕಾರ್ಯಕ್ರಮ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಸಂಭಾಪೂರ ರಸ್ತೆಯಲ್ಲಿರುವ ಶ್ರೀ ಜಗದ್ಗುರು ಪಂಚಾಚಾರ್ಯ ವೇದ ಸಂಸ್ಕೃತ ಪಾಠಶಾಲೆಯ ಆವರಣದ ಶ್ರೀ ಕಾಶೀ ವಿಶ್ವನಾಥನ ಸನ್ನಿಧಿಯಲ್ಲಿ 182ನೇ ಮಾಸಿಕ ಶ್ರೀ ಸಿದ್ಧಾಂತ ಶಿಖಾಮಣಿ ಜ್ಞಾನಾಮೃತ ಕಾರ್ಯಕ್ರಮವು ಫೆ.2ರ ಸಾಯಂಕಾಲ 06.30ಕ್ಕೆ ನಡೆಯಲಿದೆ. ಪ್ರಾತಃಕಾಲದಲ್ಲಿ ಪಾಠಶಾಲಾ ಸರ್ವ ವಿದ್ಯಾರ್ಥಿಗಳಿಂದ ಶ್ರೀ ಕಾಶೀ ವಿಶ್ವನಾಥನಿಗೆ ಮಹಾ ರುದ್ರಾಭಿಷೇಕ, ಫಲಪಂಚಾಮೃತ ಅಭಿಷೇಕ, ಕ್ಷೀರಾಭಿಷೇಕ, ಮಹಾಮಂಗಳಾರುತಿ ಪೂಜಾ ಕಾರ್ಯಕ್ರಮಗಳು ನಡೆಯಲಿವೆ.

ಸಾಯಂಕಾಲ ಜ್ಞಾನಾಮೃತ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಶ್ರೀ ಷ.ಬ್ರ ವಿರೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಹಿರೇಮಠ ಹಿರೇವಡ್ಡಟ್ಟಿ ವಹಿಸಿಕೊಳ್ಳಲಿದ್ದಾರೆ. ಅಧ್ಯಕ್ಷತೆಯನ್ನು ಎಸ್.ಎಸ್. ಮೇಟಿ ವಹಿಸಿಕೊಳ್ಳಲಿದ್ದಾರೆ. ಗುರುರಕ್ಷಾ ಆಶೀರ್ವಾದವನ್ನು ಉಮೇಶ ಮಲ್ಲಪ್ಪ ಹಡಪದ ಪಡೆದಿಕೊಳ್ಳಲಿದ್ದಾರೆ. ಉಪನ್ಯಾಸಕರಾಗಿ ಡಿ.ಬಿ. ಬಡಿಗೇರ ಆಗಮಿಸುವರು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಎಲ್.ಪಿ. ಕಂಬಿ, ವ್ಹಿ.ಎಸ್. ಶಿವಕಾಳಿಮಠ ಹಾಗೂ ಕಾಶೀ ಪೀಠದ ರುದ್ರಬಳಗದ ತಾಯಂದಿರು, ಭಕ್ತಾದಿಗಳು ಬಾಗವಹಿಸುವರು.

ಕಾರ್ಯಕ್ರಮದ ಭಕ್ತಿಸೇವೆಯನ್ನು ಈರಣ್ಣ ಎಸ್.ಜವಳಿ ಲಕ್ಕುಂಡಿ ಕುಟುಂಬವರ್ಗದವರು ವಹಿಸಿಕೊಂಡಿದ್ದಾರೆ. ಸರ್ವ ಸದ್ಭಕ್ತರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ವಿಶ್ವನಾಥನ ಕೃಪಾಶಿರ್ವಾದಕ್ಕೆ ಪಾತ್ರರಾಗಬೇಕಾಗಿ ಜ್ಞಾನಾಮೃತ ಮತ್ತು ಪಾಠಶಾಲಾ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

**ಜಿಲ್ಲಾಡಳಿತ ಭವನದಲ್ಲಿ ಮಡಿವಾಳ ಮಾಚಿದೇವ ಜಯಂತಿ**

# ಅರಸುತನ ಮೇಲಲ್ಲ, ಅಗಸತನ ಕೀಳಲ್ಲ

**■ವಿಜಯಸಾಕ್ಷಿ ಸುದ್ದಿ, ಗದಗ**

12ನೇ ಶತಮಾನದ ಶರಣರು ತಮ್ಮ ವಚನದ ಮೂಲಕ ಸಮಾಜದ ಅಂಕು ಡೊಂಕುಗಳನ್ನು ವಚನಗಳ ಅಸ್ತ್ರದಿಂದ ತಿದ್ದಲು ಶ್ರಮಿಸಿದ್ದಾರೆ. 12ನೇ ಶತಮಾನದ ಮಡಿವಾಳ ಮಾಚಿದೇವರು ಮನುಕುಲದ ಕಲ್ಯಾಣಕ್ಕಾಗಿ ಶ್ರಮಿಸಿದವರಲ್ಲಿ ಒಬ್ಬರು. ವಚನದ ಸಾರವನ್ನು ಅರಿತು ಸಂದೇಶಗಳನ್ನು ನಿಜ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ. ಹೇಳಿದರು.

ಅವರು, ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ನಡೆದ ಶ್ರೀ ಮಡಿವಾಳ ಮಾಚಿದೇವ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಮಡವಾಳ ಮಾಚಿದೇವರು ಕಾಯಕ ನಿಷ್ಠರು. ಅವರೊಬ್ಬ ಮಹಾನ ಅವತಾರ ಪುರುಷರಾಗಿ ಸಮಾಜದ ಒಳಿತಿಗಾಗಿ ಶ್ರಮಿಸಿದ ಶರಣರಾಗಿದ್ದಾರೆ. ಅಚಲ ಕಾಯಕ ನಿಷ್ಠೆ ತನ್ನ



ಕಾಯಕವೇ ಭಕ್ತಿ ಉಸಿರು ಎಂದು ನಂಬಿದ್ದರು. ಶಿವ ಶರಣರ ಹಾಗೂ ಕಾಯಕದಲ್ಲಿ ನಿಷ್ಠೆ ಉಳ್ಳವರ ಬಟ್ಟೆಗಳನ್ನು ಮಡಿ ಮಾಡಿ ತಲುಪಿಸುವ ಕಾರ್ಯ ಇವರದಾಗಿತ್ತು. ಅದನ್ನು ಶ್ರದ್ಧೆಯಿಂದ ಮಾಡುವ ಮೂಲಕ ಅರಸುತನ ಮೇಲಲ್ಲ, ಅಗಸತನ ಕೀಳಲ್ಲ ಎಂದು ಜಗತ್ತಿಗೆ ಸಾರಿದ ಮಹಾಮಹಿಮ ಎಂದು ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಬಣ್ಣಿಸಿದರು.

ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ ಕಾರ್ಯಕ್ರಮ ಉದ್ಘಾಟಿಸಿದರು.

ಉಪನ್ಯಾಸಕರಾಗಿ ಆಗಮಿಸಿದ್ದ ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಧ್ಯಾಪಕ ಸಿದ್ಧಲಿಂಗೇಶ ಸಜ್ಜನ ಶೆಟ್ಟರ್ ಮಾತನಾಡಿ, ಕಲ್ಯಾಣ ಕಾಲದಲಿದ್ದ ಶರಣರೊಂದಿಗೆ ಹಲವಾರು ವಚನಗಳನ್ನು ರಚಿಸಿ ಕಾಯಕದ ಮಹತ್ವವನ್ನು ಸಮಾಜಕ್ಕೆ ಕೊಡುಗೆಯಾಗಿ ನೀಡಿದ್ದಾರೆ ಎಂದರು.

ವೀರನಿಷ್ಠೆಯ ಶರಣನೀತ, ವಿಜಾಪುರ ಜಿಲ್ಲೆಯ ಸಿಂಧಗಿ ತಾಲೂಕಿನ 'ದೇವರ ಹಿಪ್ಪರಗಿಯಲ್ಲಿ' ಪರುವತಯ್ಯ –ಸುಜ್ಞಾನವ್ವ ದಂಪತಿಗಳ ಪುತ್ರ ರತ್ನ –ಶರಣ ಕಿರಣ ಮಡಿವಾಳ ಮಾಚಿದೇವರು. ದೇವರ ಹಿಪ್ಪರಿಗೆ ಇವರ ಜನ್ಮಸ್ಥಳ. ಕಾರ್ಯಕ್ಷೇತ್ರ ಕಲ್ಯಾಣ. ಆರಾಧ್ಯದೈವ ಕಲ್ಲಿನಾಥ. ಕಾವ್ಯ ಪುರಾಣಗಳಲ್ಲಿ ಇವರನ್ನು ವೀರಭದ್ರನ ಅವತಾರವೆಂದು ಬಣ್ಣಿಸಲಾಗಿದೆ ಎಂದರು. ಶರಣರ ಬಟ್ಟೆಗಳನ್ನು ತೊಳೆಯುವುದು (ಶುಚಿ ಮಾಡುವುದು) ಇವರ ಕಾಯಕವಾಗಿತ್ತು ಎಂದು ಅವರು ವಿವರಿಸಿದರು.

ಕಾರ್ಯಕ್ರಮದಲ್ಲಿ ಹೆಚ್ಚವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ. ಬಿ. ಸಂಕದ, ಜಿ.ಪಂ ಉಪಕಾರ್ಯದರ್ಶಿ ಸಿ ಆರ್ ಮುಂಡರಗಿ, ಜಿಲ್ಲಾ ಖಜಾನೆ ಉಪ ನಿರ್ದೇಶಕ ಹರಿನಾಥ ಬಾಬು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ, ಸಮಾಜದ ಗಣ್ಯರು, ಹಿರಿಯರು ಹಾಜರಿದ್ದರು. ಪ್ರಾಧ್ಯಾಪಕ ಬಾಹುಬಲಿ ಜೈನರ ಕಾರ್ಯಕ್ರಮ ನಿರ್ವಹಿಸಿದರು.

# ಒಳಮೀಸಲಾತಿ ಜಾರಿಗೊಳಿಸಲು ಒತ್ತಾಯಿಸಿ ಮನವಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಡಾ. ಬಿ.ಆರ್. ಅಂಬೇಡ್ಕರರ ಆಶಯದಂತೆ ಅಸ್ಪ್ರಶ್ಯ ಸಮುದಾಯಗಳು ಮುಖ್ಯವಾಹಿನಿಗೆ ಬರಬೇಕಾದರೆ ಸುಪ್ರೀಂಕೋರ್ಟ್ ಆದೇಶದಂತೆ ಒಳಮೀಸಲಾತಿ ಜಾರಿಗೆ ತರಬೇಕೆಂದು ಒತ್ತಾಯಿಸಿ ಮಾದಿಗ ಸಮುದಾಯಗಳ ಸ್ವಾಭಿಮಾನದ ಒಕ್ಕೂಟದ ವತಿಯಿಂದ ಗದಗ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಒಕ್ಕೂಟದ ಅಧ್ಯಕ್ಷ ಉಡಚಪ್ಪ ಹಳ್ಳಿಕೇರಿ ಮಾತನಾಡಿ, ಈ ಅಸಮಾನತೆಯನ್ನು ಸಂತ್ರಸ್ಥರಾದ ಮಾದಿಗರು, ದಲಿತರು ಮತ್ತು ಪ್ರಗತಿಪರ ಸಂಘಟನೆಗಳ ನೇತೃತ್ವದಲ್ಲಿ 30 ವರ್ಷಗಳ ನಿರಂತರ



ಹೋರಾಟದ ಪರಿಣಾಮದಿಂದಲೇ ಸರ್ವೋಚ್ಚ ನ್ಯಾಯಾಲಯವು ಸಂವಿಧಾನ ಬದ್ಧವಾಗಿ ರಾಜ್ಯ ಸರ್ಕಾರಗಳೇ ದತ್ತಾಂಶವನ್ನು ಪಡೆದು ಒಳಮೀಸಲಾತಿ ವರ್ಗೀಕರಣವನ್ನು ಜಾರಿ ಮಾಡಬಹುದೆಂದು ಆದೇಶಿಸಿದೆ. ಈ ಆದೇಶವನ್ನು ಮರುಪರಿಶೀಲಿಸಲು ಸಲ್ಲಿಸಿದ್ದ ಎಲ್ಲಾ ಅರ್ಜಿಗಳನ್ನು ವಜಾ ಮಾಡಿದೆ.

ರಾಜ್ಯ ಕಾಂಗ್ರೆಸ್ ಸರ್ಕಾರ ತನ್ನ ಚುನಾವಣೆಯಲ್ಲಿ ಒಳಮೀಸಲಾತಿಯನ್ನು ಜಾರಿ ಮಾಡಲಾಗುವುದು ಎಂಬ ಭರವಸೆ ನೀಡಿದ್ದರಿಂದ ಈ ಎಲ್ಲ ಅಸ್ಪ್ರಶ್ಯ ಜನಾಂಗದವರು ಕಾಂಗ್ರೆಸ್ ಮತ ನೀಡಿ ಬಹುಮತದ ಸರ್ಕಾರ ಬಂದಿದೆ. ಆದರೆ, ಇದುವರೆಗೂ ಮೀಸಲಾತಿಯನ್ನು ಜಾರಿ ಮಾಡಿಲ್ಲ ಎಂದು ತಮ್ಮ ಅಸಮಾಧಾನ ವ್ಯಕ್ತಪಡಿಸಿದರು.

ಸಮಾಜ ಕಲ್ಯಾಣ ಇಲಾಖೆ ಬಜೆಟ್‌ನಲ್ಲಿ ಮತ್ತು ಎಸ್‌ಸಿಎಸ್‌ಪಿ/ಟಿಎಸ್‌ಪಿ ಅನುದಾನದಲ್ಲಿ ಮಾದಿಗ, ಸಮಗಾರ, ಡೋಹರ, ಮಚಗಾರ ಜಾತಿಗಳ ಜನಸಂಖ್ಯೆಯ ಆಧಾರದ ಮೇಲೆ ಪ್ರತ್ಯೇಕವಾಗಿ ಅನುದಾನ ಮೀಸಲಿಟ್ಟು ಅದೇ ವರ್ಷ ವೆಚ್ಚ ಮಾಡಲು ಕ್ರಮ ಕೈಗೊಳ್ಳಬೇಕು ಎಂಬ ಬೇಡಿಕೆಗಳನ್ನು ಮನವಿಯನ್ನು ಮುಖ್ಯಮಂತ್ರಿಗಳಿಗೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಒಕ್ಕೂಟದ ಮುಖಂಡರಾದ ಅಶೋಕ ಕುಡತಿನ್ನಿ, ಡಿ.ಜಿ. ಕಟ್ಟಿಮನಿ, ರಾಘವೇಂದ್ರ ಪರಸಪ್ಪ ಪರಾಪೂರ, ಗಣೇಶ ಹುಬ್ಬಳ್ಳಿ, ಮಂಜು ಬುರಡಿ, ಮಂಜುನಾಥ ಗಜಕೋಶ, ಮಾರುತಿ ಗುಡಿಮನಿ, ಯಮನೂರಪ್ಪ ಹರಿಜನ, ಯಮನೂರಪ್ಪ ಅಬ್ಬಿಗೇರಿ, ಉಮೇಶ ಪೂಜಾರ, ಚಂದ್ರಶೇಖರ ಕೋಟ್ನಿಕಲ್, ಪೂಜಾ ಎಂ.ಬೇವೂರ, ಯಲ್ಲಪ್ಪ ಮಾದರ, ಚಂದ್ರು ಮಾದರ, ಬಸವಂತ ಕಡಕೋಳ, ರಾಮು ಪಿ.ಬಳ್ಳಾರಿ, ಪ್ರವೀಣ ತೆಗ್ಗಿನಮನಿ, ಪ್ರಕಾಶ ಕೇಲೂರ ಮುಂತಾದವರು ಉಪಸ್ಥಿತರಿದ್ದರು.

# ಶ್ರೀ ವೀರಪ್ಪಜ್ಜನವರ ತೊಟ್ಟಿಲೋತ್ಸವ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪುಣ್ಯಾರಾಧನೆಯ ಶತಮಾನೋತ್ಸವವನ್ನು ಆಚರಿಸಿಕೊಳ್ಳುತ್ತಿರುವ ಕೋಡಿಕೊಪ್ಪದ ಶ್ರೀ ವೀರಪ್ಪಜ್ಜನವರ ಶ್ರೀಮಠದಲ್ಲಿ ಶುಕ್ರವಾರ ಶ್ರೀ ವೀರಪ್ಪಜ್ಜನವರ ತೊಟ್ಟಿಲೋತ್ಸವವು ಸಡಗರ, ಸಂಭ್ರಮಗಳಿಂದ ನಡೆದು ಭಕ್ತರ ಹೃನ್ಮನಗಳನ್ನು ತುಂಬಿತು. ಪ್ರವಚನಕಾರ ಡಾ. ವಿಶ್ವನಾಥ ಮಹಾಸ್ವಾಮಿಗಳು ಶ್ರೀ ವೀರಪ್ಪಜ್ಜನವರ ಜನನದ ಬಗ್ಗೆ ಹೇಳುತ್ತಿದ್ದಂತೆ ಸುಮಂಗಲೆಯರು ಶ್ರೀ ವೀರಪ್ಪಜ್ಜನವರನ್ನು ತೊಟ್ಟಿಲಲ್ಲಿ ಹಾಕುವ ಕಾರ್ಯಕ್ಕೆ ಸಿದ್ಧತೆ ಮಾಡಿಕೊಂಡರು. ಈ ಸಂದರ್ಭದಲ್ಲಿ ಆಶೀರ್ವಚನ ನೀಡಿದ ಕುಷ್ಟಗಿಯ ಶ್ರೀ ಮದ್ದಾನೇಶ್ವರ ಮಠದ 108 ಶ್ರೀ ಕರಿಬಸವ ಶಿವಾಚಾರ್ಯರು, ಮಾನವರಾಗಿ ಹುಟ್ಟಿ ಮಹಾದೇವನ ಸ್ಥಾನವನ್ನು ಗಳಿಸಿಕೊಂಡವರು ಶ್ರೀ ವೀರಪ್ಪಜ್ಜನವರು. ಭಕ್ತರ ಮನದಲ್ಲಿ



ಗದ್ದುಗೆಯನ್ನು ನಿರ್ಮಿಸಿ ತಮ್ಮ ಸ್ಥಾನವನ್ನು ಭಕ್ತರ ಮನದಲ್ಲಿ ಸ್ಥಿರ ಮಾಡಿಕೊಂಡ ಮಹಾಮಹಿಮರು. ಅವರನ್ನು ಕಾಣುವ ಸೌಭಾಗ್ಯ ನಮಗಿಲ್ಲದೆ ಹೋದರೂ, ಅವರ ಪುಣ್ಯಾರಾಧನೆಯ ಶತಮಾನೋತ್ಸವವನ್ನು ಆಚರಿಸುವ ಭಾಗ್ಯ ನಮಗೆ ದೊರಕಿರುವುದು ನಮ್ಮೆಲ್ಲರ ಪುಣ್ಯ ಎಂದರು. ಶ್ರೀ ವೀರಪ್ಪಜ್ಜನವರದು ಹೂವಿನಂತಹ ಬದುಕು. ಹೂವು ಒಂದು ದಿನವಷ್ಟೆ ಬದುಕಿ ಭಗವಂತನ ಮುಡಿಗೆ ಏರುವ ಮೂಲಕ ತನ್ನ ಬದುಕನ್ನು ಸಾರ್ಥಕಪಡಿಸಿಕೊಳ್ಳುತ್ತದೆ. ಹಾಗೆಯೇ ಶ್ರೀ ವೀರಪ್ಪಜ್ಜನವರೂ ಸಹ ನಮಗೆ ಕಷ್ಟಪಟ್ಟವರಂತೆ ಕಂಡರೂ ಆ ಕಷ್ಟದಲ್ಲಿಯೇ ಸುಖವನ್ನು ಕಂಡು, ನೋವನ್ನು ಉಂಡು ಪರಮ ಪದವಿಯನ್ನು ಗಳಿಸಿದ ಮಹಾ ಪುರುಷರು.

ನಾವೂ ಸಹ ಅವರಂತೆಯೆ ನಮ್ಮ ಬದುಕನ್ನು ಸಾಧಿಸಲು ಕಲಿಯಬೇಕು ಎಂದು ಹೇಳಿದರು.ಟ್ರಸ್ಟ್ ಕಮಿಟಿಯ ಅಧ್ಯಕ್ಷ ಡಾ. ಎಂ.ಸಿ. ಚಪ್ಪನ್ನಮಠ ಅಧ್ಯಕ್ಷತೆ ವಹಿಸಿದ್ದರು. ಅಮೃತೇಶ ಅಣ್ಣಿಗೇರಿಮಠ ಸ್ವಾಗತಿಸಿದರು. ಶಿಕ್ಷಕ ವಿ.ಎ. ಕುಂಬಾರ ನಿರೂಪಿಸಿದರು. ಡಾ. ಆರ್.ಕೆ. ಗಚ್ಚಿನಮಠ ವಂದಿಸಿದರು.

# ಫಕೀರೇಶ್ವರ ಶ್ರೀಗಳ ಜನ್ಮದಿನ ಆಚರಣೆ




**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಶಿರಹಟ್ಟಿಯ 13ನೇ ಪಟ್ಟಾಧ್ಯಕ್ಷರಾದ ಜಗದ್ಗುರು ಫಕೀರ ಸಿದ್ಧರಾಮ ಮಹಾಸ್ವಾಮಿಗಳ 75ನೇ ಜನ್ಮ ದಿನಾಚರಣೆಯನ್ನು ಇಲ್ಲಿಯ ಫಕೀರೇಶ್ವರ ಶಾಖಾಮಠದಲ್ಲಿ ಆಚರಿಸಲಾಯಿತು.

ಅಲ್ಲಮಪ್ರಭುದೇವರ ಮಠದ ಸಿದ್ಧಲಿಂಗೇಶ್ವರ ಮಹಾಸ್ವಾಮಿಗಳು ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಶಿರಹಟ್ಟಿ ಫಕೀರೇಶ್ವರ ಮಠವು ಈ ನಾಡು ಕಂಡ ವಿಶೇಷ ಮಠವಾಗಿದ್ದು, ಸರ್ವ ಧರ್ಮಗಳ ಸಂಕೇತವಾಗಿದೆ. 13ನೇ ಪಟ್ಟಾಧ್ಯಕ್ಷರಾದ ಫಕೀರ ಸಿದ್ಧರಾಮ ಸ್ವಾಮೀಜಿಗಳಿಗೆ ದೇವರು ನೂರು ವರ್ಷ ಆರೋಗ್ಯವನ್ನು ನೀಡಿ ಭಕ್ತರಿಗೆ ಆಶಿರ್ವಾದ ನೀಡಲಿ ಎಂದು ಶುಭ ಕೋರಿದರು.

ಶಾಖಾಮಠದ ಸಂಚಾಲಕ ಅಮೃತ ಮಂಟೂರು ಮಾತನಾಡಿ, ಭಾವೈಕ್ಯತೆಯ ಶಿರಹಟ್ಟಿ ಮಠದ 13ನೇ ಪಟ್ಟಾಧಿಕಾರಿಗಳಾದ ಫಕೀರ ಸಿದ್ಧರಾಮ ಸ್ವಾಮೀಜಿಗಳ 75ನೇ ಜನ್ಮದಿನವನ್ನು ಆಚರಿಸುವುದರ ಮೂಲಕ ಗ್ರಾಮದಲ್ಲಿ ಶಾಖಾಮಠವನ್ನು ಬೆಳಕಿಗೆ ತರಲು ಪ್ರಯತ್ನಿಸಲಾಗುತ್ತಿದ್ದು, ಭಕ್ತರು ಸಹಾಯ–ಸಹಕಾರ ನೀಡಬೇಕು. ಮಕ್ಕಳನ್ನು ಶಿಕ್ಷಣವಂತರನ್ನಾಗಿ ಮಾಡಲು ಶ್ರೀ ಮಠದಿಂದ ಶಿಕ್ಷಣ ಕೇಂದ್ರವನ್ನು ತೆರೆಯುವ ಅಭಿಲಾಷೆಯನ್ನು ಹೊಂದಲಾಗಿದ್ದು, ಇಲ್ಲಿ ಕಲಿತ ಮಕ್ಕಳು ಐ.ಎ.ಎಸ್, ಕೆ.ಎ.ಎಸ್. ಹಾಗೂ ವಿಜ್ಞಾನಿಗಳಾಗುವ ಕನಸನ್ನು ಕಂಡಿದ್ದೇವೆ ಎಂದರು.

ನಿವೃತ್ತ ಶಿಕ್ಷಕ ಅಶೋಕ ಬೂದಿಹಾಳ, ದೇವಪ್ಪ ಗರ್ಜಪ್ಪನವರ, ಮಲ್ಲಪ್ಪ ಮುಳಗುಂದ ಸೇರಿದಂತೆ ಅಂಗನವಾಡಿ ಕಾರ್ಯಕರ್ತರು ಹಾಜರಿದ್ದರು.

**ಅ.ಕ. ಪಂ. ಪಂಚಾಕ್ಷರಿ ಗವಾಯಿಗಳವರ ಅಂಧ ಕಲಾವಿದರ ಸಂಘದ 30ನೇ ವಾರ್ಷಿಕೋತ್ಸವ**

# ಪಂ. ಪಂಚಾಕ್ಷರಿ ಗವಾಯಿಗಳವರ ಜಯಂತ್ಯುತ್ಸವ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಅಖಿಲ ಕರ್ನಾಟಕ ಪಂ. ಪಂಚಾಕ್ಷರಿ ಗವಾಯಿಗಳವರ ಅಂಧ ಕಲಾವಿದರ ಸಂಘ ಗದಗ ಹಾಗೂ ಶ್ರೀ ಪಂ. ಪುಟ್ಟರಾಜ ಗವಾಯಿಗಳ ದೇವಸ್ಥಾನ ಟ್ರಸ್ಟ್ ನೀರಲಗಿ ಇವರ ಸಹಯೋಗದಲ್ಲಿ ಸಂಘದ 30ನೇ ವರ್ಷದ ವಾರ್ಷಿಕೋತ್ಸವ ಸಮಾರಂಭ ಹಾಗೂ ಲಿಂ. ಪಂ. ಪಂಚಾಕ್ಷರಿ ಗವಾಯಿಗಳವರ 133ನೇ ವರ್ಷದ ಜಯಂತ್ಯುತ್ಸವ ಸಮಾರಂಭವು ಫೆ. 2ರಂದು ಗದಗ ತಾಲೂಕಿನ ನೀರಲಗಿ ಗ್ರಾಮದ ಪಂ. ಪುಟ್ಟರಾಜ ಗವಾಯಿಗಳವರ ದೇವಸ್ಥಾನದಲ್ಲಿ ಜರುಗಲಿದೆ.

ಫೆ. 2ರಂದು ಸಂಜೆ 6 ಗಂಟೆಗೆ ಧರ್ಮೋತ್ತೇಜಕ ಸಭೆ ಜರುಗುವದು. ಈ ಕಾರ್ಯಕ್ರಮದಲ್ಲಿ ಗದಗ–ಅಡ್ನೂರ–ರಾಜೂರ ಬ್ರಹನ್ಮಠದ ಪೂಜ್ಯಶ್ರೀ ಅಭಿನವ ಪಂಚಾಕ್ಷರ ಶಿವಾಚಾರ್ಯರು ಸಾನ್ನಿಧ್ಯ ವಹಿಸುವರು. ಗದುಗಿನ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿ ಪೂಜ್ಯಶ್ರೀ ಕಲ್ಲಯ್ಯಜ್ಜನವರು ನೇತೃತ್ವ ವಹಿಸುವರು. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ಜಿಲ್ಲಾ ಉಸ್ತುವಾರಿ



ಸಚಿವ ಡಾ. ಎಚ್.ಕೆ. ಪಾಟೀಲ ಅಧ್ಯಕ್ಷತೆ ವಹಿಸುವರು. ಅತಿಥಿಗಳಾಗಿ ಮಾಜಿ ಶಾಸಕ ಡಿ.ಆರ್. ಪಾಟೀಲ, ಶಾಸಕ ಜಿ.ಎಸ್. ಪಾಟೀಲ, ವೀರೇಶ್ವರ ಪುಣ್ಯಾಶ್ರಮದ ವ್ಯವಸ್ಥಾಪಕ ಹೇಮರಾಜಶಾಸ್ತ್ರಿ ಹಿರೇಮಠ, ಅ.ಕ.ಪಂ. ಗ. ಅಂಧ ಕಲಾವಿಧರ ಸಂಘದ ಅಧ್ಯಕ್ಷ ಡಾ. ಮಹಾದೇವಪ್ಪ ಗವಾಯಿಗಳು, ರಾಜ್ಯ ರಸ್ತೆ ಸಾರಿಗೆ ನಿಗಮದ ಉಪಾಧ್ಯಕ್ಷ ಪೀರಸಾಬ ಕೌತಾಳ, ಯುವ ಮುಖಂಡ ಕೃಷ್ಣಗೌಡ ಪಾಟೀಲ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಉಪಾಧ್ಯಕ್ಷ ಶರಣಬಸಪ್ಪ(ರಾಜು)ಗುಡಿಮನಿ, ಕ್ರಾಂತಿಸೇನಾ ಜಿಲ್ಲಾಧ್ಯಕ್ಷ ಬಾಬು ಬಾಕಳೆ, ಬಿಜೆಪಿ ಧುರೀಣ ವಿಜಯಕುಮಾರ ಗಡ್ಡಿ, ಜಿ.ಪಂ ಮಾಜಿ ಅಧ್ಯಕ್ಷ ಸಿದ್ದಲಿಂಗೇಶ್ವರ ಪಾಟೀಲ, ನಗರಸಭೆ ಸದಸ್ಯ ಅನಿಲ್ ಅಬ್ಬಿಗೇರಿ, ಪಂಚಮಸಾಲಿ ಪಂಚಸೇನೆಯ ಜಿಲ್ಲಾಧ್ಯಕ್ಷ ಮಂಜುನಾಥ ಗುಡದೂರ, ವಕೀಲರಾದ ಎಂ.ಆರ್. ಹಿರೇಮಠ, ಪಿಪಿಜಿ ಸಂಗೀತ ಪಾಠಶಾಲೆಯ ಮುಖ್ಯೋಪಾಧ್ಯಾಯ ಕಳಕಪ್ಪ ಮುದ್ಲಾಪೂರ, ಪಿಪಿಜಿ ಸಂಗೀತ ಪಾಠಶಾಲೆಯ ಸೂಪರಿಡೆಂಟ್ ಎಂ.ಎಂ. ಶಿರೋಳಮಠ ಭಾವಹಿಸುವರು. ಸಮಾಜಸೇವಕ ಬಸಲಿಂಗಪ್ಪ ಮರಡ್ಡಿ ಪ್ರಾಸ್ತವಿಕವಾಗಿ ಮಾತನಾಡುವರು. ಹರಪ್ಪನಳ್ಳಿಯ ಸಂಗೀತ ಶಿಕ್ಷಕ ಹೆಗ್ಗಪ್ಪ ಪರ್ಸನಾಯ್ಕ ಸಭಾ ನಿರೂಪಣೆ ಮಾಡುವರು.

ಇದಕ್ಕೂ ಮುನ್ನ ಮಧ್ಯಾಹ್ನ 2 ಗಂಟೆಗೆ ಜರುಗುವ ಸಂಗೀತ ಕಾರ್ಯಕ್ರಮದಲ್ಲಿ ನಾಡಿನ ವಿವಿಧ ಭಾಗಗಳಿಂದ ಆಗಮಿಸುವ ಅಂಧ ಕಲಾವಿದರಿಂದ ಸಂಗೀತ ಸೇವೆ ಜರುಗುವದು. ಈ ಕಾರ್ಯಕ್ರಮದ ನಿರೂಪಣೆಯನ್ನು ಮುಳಗುಂದದ ಸಂಗೀತ ಶಿಕ್ಷಕ ಶರಣಪ್ಪ ಗೋಡೆಕಾರ ಹಾಗೂ ಸಿದ್ದಲಿಂಗೇಶ ಗುರಿಕಾರ ಮಾಡುವರು ಎಂದು ಅಖಿಲ ಕರ್ನಾಟಕ ಪಂ. ಪಂಚಾಕ್ಷರಿ ಗವಾಯಿಗಳವರ ಅಂಧ ಕಲಾವಿದರ ಸಂಘದ ಅಧ್ಯಕ್ಷ ಮಹದೇವಪ್ಪ ಗವಾಯಿಗಳು ಹಾಗೂ ಕಾರ್ಯಕಾರಿಣಿ ಸದಸ್ಯ ಭರಮಪ್ಪ ಪಲ್ಲೇದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇದೇ ಸಂದರ್ಭದಲ್ಲಿ ಡಾ. ಸುನೀಲ್ ಗೋಕಲೆ, ಅಣ್ಣಪ್ಪ ಅಬಗುಂಡಿ, ಅನುಪಮಾ ಅಬಗುಂಡಿ, ಮಲ್ಲಿಕಾರ್ಜುನ ಮಡಿವಾಳರ, ಹನುಮಂತರಾಯ ತಳವಾರ, ಉಮೇಶ ಕುರಿ, ಸಿದ್ದಪ್ಪ ಕುಂಬಾರ, ಶರಣಪ್ಪ ಕೆಸರಬಾವಿ, ಗುರುರಾಜ ಮಾಳಗಿ, ಗಾಯತ್ರಿ ಪತ್ತಾರ, ಬಸವರಾಜ ವಾಲಿಕಾರ ಅವರನ್ನು ಸನ್ಮಾನಿಸಲಾಗುವುದು.

# ಮಾರಕ ಯೋಜನೆ ಎನ್‌ಪಿಎಸ್ ಕೈಬಿಡಿ

▶▶ ಮೊದಲನೇ ಪುಟದಿಂದ

ಇದಕ್ಕೆ ಸ್ಪಂದಿಸಿದ ಶಾಸಕರು, ಮುಂದಿನ ಅಧಿವೇಶನದಲ್ಲಿ ಈ ವಿಷಯದ ಕುರಿತು ಪ್ರಶ್ನೆ ಮಾಡಿ ಸರಕಾರಕ್ಕೆ ಎನ್‌ಪಿಎಸ್‌ನಿಂದ ಆಗುವ ಸಮಸ್ಯೆ ಬಗ್ಗೆ ವಿವರಿಸುವದರ ಜೊತೆಗೆ ಓಪಿಎಸ್ ಜಾರಿಗೊಳಿಸುವಂತೆ ಮನವಿ ಮಾಡಿ ನ್ಯಾಯ ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡುವದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಎನ್‌ಪಿಎಸ್ ನೌಕರರ ಸಂಘದ ಗೌರವಾಧ್ಯಕ್ಷ ಮಂಜುನಾಥ ಕೊಕ್ಕರಗುಂದಿ, ಪ್ರ.ಕಾರ್ಯದರ್ಶಿ ಸಿದ್ದಪ್ಪ ಸಜ್ಜಗಾರ, ಉಪಾಧ್ಯಕ್ಷ ಶ್ರೀಕಾಂತ ನಂದೆಣ್ಣವರ, ಕರಾಸ ನೌಕರರ ಸಂಘದ ತಾಲೂಕಾಧ್ಯಕ್ಷ ಜಿ.ಡಿ. ಹವಳದ, ಪ್ರ.ಕಾರ್ಯದರ್ಶಿ ಎಮ್.ಎ. ನದಾಫ್, ಎಂ.ಡಿ. ವಾರದ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ಬಿ.ಎಸ್. ಹರ್ಲಾಪೂರ, ಪ್ರ.ಕಾರ್ಯದರ್ಶಿ ಚಂದ್ರಕಾಂತ ನೇಕಾರ, ಬಸವರಾಜ ಯರಗುಪ್ಪಿ, ಎ.ಎಮ್. ಅಕ್ಕಿ, ಎ.ಬಿ. ಗೌಡರ, ಮಂಜುನಾಥ ಚವ್ಹಾಣ, ಮುತ್ತು ಹುಬ್ಬಳ್ಳಿ, ಸತೀಶ್ ಬೋಮಲೆ, ಗೋಪಾಲ ರಾಜೊಳಿ, ಜ್ಯೋತಿ ಗಾಯಕವಾಡ, ಎಚ್.ವಾಯ್. ಹಂಜಗಿ, ಬಿ.ಟಿ. ಹೆಬ್ಬಾಳ, ರಫೀಕ್ ಬಾವಿಕಟ್ಟಿ, ಆಸಿಫ್ ಅತ್ತಾರ, ಕೆಪಿಟಿಸಿಎಲ್ ಸಂಘದ ಸತೀಶ ಮೇಟಿ, ರಘುಪತಿ ನಾಯಕ, ಬಸವರಾಜ ಹೆಬ್ಬಾಳ, ಕಿರಣಕುಮಾರ ಪಮ್ಮಾರ ಹಾಗೂ ತಾಲೂಕಿನ ಎಲ್ಲಾ ಸರ್ಕಾರಿ ನೌಕರರ ಸಂಘಟನೆಗಳ ಪದಾಧಿಕಾರಿಗಳು ಹಾಜರಿದ್ದರು.

**ಜೆಸಿಐ ಲಕ್ಷ್ಮೇಶ್ವರ ಪುಲಿಗೆರೆ ಪ್ರಭೆ ಘಟಕದ ಸೇವಾಧಿಕಾರ ಸ್ವೀಕಾರ ಸಮಾರಂಭ**

# ಸಾಮರ್ಥ್ಯ ಬಳಸಿ ಸಾಧನೆ ಮಾಡಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದಲ್ಲಿ ನೂತನವಾಗಿ ಅಸ್ತಿತ್ವಕ್ಕೆ ಬಂದ ಜೆಸಿಐ ಲಕ್ಷ್ಮೇಶ್ವರ ಪುಲಿಗೆರೆ ಪ್ರಭೆ ಘಟಕದ ಸೇವಾಧಿಕಾರ ಸ್ವೀಕಾರ ಸಮಾರಂಭವು ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನದ ಆವರಣದಲ್ಲಿ ಜರುಗಿತು.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿದ್ದ ಹೂವಿನಶಿಗ್ಲಿ ವಿರಕ್ತಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಜೆಸಿಐ ಸಂಸ್ಥೆ ಯುವಕರನ್ನು ಬೆಳೆಸುವ ಉದ್ದೇಶದಿಂದ ಅಸ್ತಿತ್ವದಲ್ಲಿದೆ. ಹಲವಾರು ವರ್ಷಗಳಿಂದ ಈ ಸಂಸ್ಥೆ ಅನೇಕ ಉತ್ತಮ ಕಾರ್ಯಗಳನ್ನು ಮಾಡುತ್ತಾ ಗಮನ ಸೆಳೆಯುತ್ತಿದ್ದು, ಯುವಕರು ತಮ್ಮಲ್ಲಿರುವ ಸಾಮರ್ಥ್ಯವನ್ನು ಬಳಸಿಕೊಂಡು ಉತ್ತಮ ಸಾಧನೆ ಮಾಡಬಹುದು. ಆದರೆ ಮೊಬೈಲ್ ಗೀಳು, ದುಶ್ಚಟಗಳಿಗೆ ದಾಸರಾಗುವ ಮೂಲಕ ತಮ್ಮಲ್ಲಿರುವ ಸಾಮರ್ಥ್ಯವನ್ನು ಕಳೆದುಕೊಳ್ಳುತ್ತಿದ್ದಾರೆ. ಸಮಾಜಕ್ಕೆ ಉತ್ತಮ ಕೊಡುಗೆಗಳನ್ನು ನೀಡುವ ಮೂಲಕ ವ್ಯಕ್ತಿತ್ವ ರೂಪಿಸಿಕೊಳ್ಳಬಹುದಾಗಿದ್ದು, ಈ ನಿಟ್ಟಿನಲ್ಲಿ ಜೆಸಿಐ ಸಂಸ್ಥೆ ಸೂಕ್ತ ವೇದಿಕೆಯಾಗಿದೆ ಎಂದು ನುಡಿದರು.




ಕಾರ್ಯಕ್ರಮ ಉದ್ಘಾಟಿಸಿದ ಜೆಸಿಐ ವಲಯಾಧ್ಯಕ್ಷ ಜೆಸಿಐ ಸೆನೆಟರ್ ಸಿಎ ಗೌರೀಶ ಭಾರ್ಗವ್ ಮಾತನಾಡಿ, ಮಕ್ಕಳ ವ್ಯಕ್ತಿತ್ವ ವಿಕಸನ ಮತ್ತು ಅವರಲ್ಲಿ ನಾಯಕತ್ವ ಗುಣ ಬೆಳೆಸುವಲ್ಲಿ ಜೆಸಿಐ ಸಂಸ್ಥೆ ಶ್ರಮಿಸುತ್ತಿದೆ. ಯುವಜನತೆಗೆ ಮಾರ್ಗದರ್ಶನ, ವ್ಯಕ್ತಿತ್ವ ವಿಕಸನ ಹಾಗೂ ಕೌಶಲ್ಯಗಳ ಬಗ್ಗೆ ಅರಿವು ಮೂಡಿಸುವ ಕೆಲಸವನ್ನು ಸಂಸ್ಥೆ ಮಾಡುತ್ತಿದೆ. ಸಕಾರಾತ್ಮಕ ಭಾವನೆ ಬೆಳೆಸುವಲ್ಲಿ ಹಾಗೂ ನಾಯಕತ್ವ ಗುಣ ಬೆಳೆಸುವಲ್ಲಿ ಜೆಸಿಐ ಸಂಸ್ಥೆ ಉತ್ತಮ ಕೆಲಸ ಮಾಡುತ್ತಿದೆ. ಜೆಸಿಐ ಸಂಸ್ಥೆಗೆ ಹೆಚ್ಚು ಹೆಚ್ಚು ಯುವಜನರು ಸೇರ್ಪಡೆಗೊಳ್ಳಬೇಕು. ಉತ್ತಮ ಸಮಾಜ ಕಟ್ಟುವಲ್ಲಿ ಯುವಜನರ ಪಾತ್ರ ದೊಡ್ಡದಿದೆ ಎಂದು ತಿಳಿಸಿದರು.

ವಲಯ ಉಪಾಧ್ಯಕ್ಷ ಮದಸೂಧನ್ ನಾವಡ ಮಾತನಾಡಿ, ಜೆಸಿಐ ಸಂಸ್ಥೆಯು ಸೇವಾ ಮನೋಭಾವನೆ ಬೆಳೆಸುತ್ತದೆ. ಪರಸ್ಪರರಲ್ಲಿ ಆತ್ಮವಿಶ್ವಾಸ ವೃದ್ಧಿಸುತ್ತದೆ. ಯುವಜನತೆಗೆ ಸಂಸ್ಕಾರ, ಶಿಕ್ಷಣ ಹಾಗೂ ಸಾಮಾಜಿಕ ಬದ್ಧತೆ, ಜವಾಬ್ದಾರಿ ಕಲಿಸುವ ಕೆಲಸಗಳನ್ನು ಜೆಸಿಐ ಸಂಸ್ಥೆ ಮಾಡುತ್ತಿದೆ. ಯುವಜನರಲ್ಲಿ ನಾಯಕತ್ವ ಗುಣಗಳನ್ನು ಬೆಳೆಸಿ ಪ್ರೋತ್ಸಾಹಿಸುವ ಕೆಲಸ ಮಾಡುತ್ತಿದೆ. ಉತ್ತಮ ಸಾಧನೆ ಮಾಡುವಂತೆ ಸೂಕ್ತ ತರಬೇತಿ ನೀಡುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಚಂಬಣ್ಣ ಬಾಳಿಕಾಯಿ, ಪತ್ರಕರ್ತ ಡಿ.ಎಂ. ಪೂಜಾರ, ಈರಪ್ಪ ಮೂಲಿಮನಿ, ಜೆಸಿಐ ನಮ್ಮ ಸವಣೂರ ಘಟಕದ ಅಧ್ಯಕ್ಷೆ ತೇಜಸ್ವಿನಿ ಕೊಂಡಿ, ರಾಘವೇಂದ್ರ ಪೂಜಾರ, ಲೇಡಿ ಜೆಸಿಐ ಮಧು ಕಟವಟೆ, ಜ್ಯೂ.ಜೆಸಿಐ ಸೃಜನ ಗೊಜಗೊಜಿ ಮುಂತಾದವರಿದ್ದರು.

ಜೆಸಿಐ ಲಕ್ಷ್ಮೇಶ್ವರ ಪುಲಿಗೆರೆ ಪ್ರಭೆ ಘಟಕದ ನೂತನ ಅಧ್ಯಕ್ಷೆಯಾಗಿ ಲಕ್ಷ್ಮೀ ಹಂಗನಕಟ್ಟಿ, ಕಾರ್ಯದರ್ಶಿ ಪ್ರಶಾಂತಗೌಡ ನರಸಮ್ಮನವರ ಹಾಗೂ ಉಳಿದ ಪದಾಧಿಕಾರಿಗಳು, ಸದಸ್ಯರು ಅಧಿಕಾರ ಸ್ವೀಕರಿಸಿದರು.

# ಜಿಲ್ಲಾ ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಫೆಬ್ರವರಿ 2 ಮತ್ತು 3 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು ವಿವರ ಈ ಕೆಳಗಿನಂತಿದೆ.

ಫೆಬ್ರವರಿ 2 ರಂದು ಬೆಳಿಗ್ಗೆ 10 ಗಂಟೆಗೆ ನಗರದ ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ಜರುಗುವ ಶಿವಯೋಗಿ ಶ್ರೀ ಸಿದ್ದರಾಮೇಶ್ವರ 852 ನೇ ಜಯಂತ್ಯುತ್ಸವ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸುವರು. ಬೆಳಿಗ್ಗೆ 10:30 ಗಂಟೆಗೆ ನಗರದ ಡಾ. ಬಿ ಆರ್ ಅಂಬೇಡ್ಕರ್ ಭವನದಲ್ಲಿ ಜರುಗುವ ಶಿವಸುಂದರ ಇವರ ಪುಸ್ತಕ ಬಿಡುಗಡೆ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಬೆಳಿಗ್ಗೆ11 ಗಂಟೆಗೆ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಜರುಗುವ ಸೇವಾ ತಂಡದಿಂದ ಹೃದಯ ತಪಾಸಣಾ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಸಂಜೆ 6ಗಂಟೆಗೆ ನಗರದ ಹಾತಲಗೇರಿ ರಿಂಗ್ ರಸ್ತೆ ಜರುಗುವ ಖಾನ್ ಫಿಟ್ನೆಸ್ 10ನೇ ವಾರ್ಷಿಕೋತ್ಸವದ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಫೆಬ್ರವರಿ 3 ರಂದು ಬೆಳಿಗ್ಗೆ 10 ಗಂಟೆಗೆ ಜಿಮ್ಸ್ ಸಂಸ್ಥೆಯಲ್ಲಿ ಕ್ಯಾಥ್‌ಲ್ಯಾಬ್ ಉದ್ಘಾಟನಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಭವನದಲ್ಲಿ ಜರುಗುವ ಗದಗ ತಾಲೂಕ ಗ್ಯಾರಂಟಿ ಅನುಷ್ಠಾನ ಯೋಜನಾ ಪ್ರಾಧಿಕಾರ ಸಭೆಯಲ್ಲಿ ಭಾಗವಹಿಸುವರು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ಜ್ಞಾನಭಾರತಿ ವಿದ್ಯಾಸಂಸ್ಥೆಯ ಸಂಸ್ಕಾರ-ಸಾಂಸ್ಕೃತಿಕ ಮೇಳದಲ್ಲಿ ಸಾಹಿತಿ ಕವಿತಾ ದಂಡಿನ

# ಮಕ್ಕಳಲ್ಲಿನ ಒಂಟಿತನ ದೂರವಾಗಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಮನೆಯೇ ಮೊದಲ ಪಾಠಶಾಲೆಯಾಗಿರುವುದರಿಂದ ಮಕ್ಕಳ ಶೈಕ್ಷಣಿಕ ಬೆಳವಣಿಗೆಯಲ್ಲಿ ತಾಯಿಗೆ ಮೊದಲ ಸ್ಥಾನವಿದೆ. ಮಗುವಿಗೆ ಮೌಲ್ಯಾಧಾರಿತ ಬದುಕನ್ನು ಕಟ್ಟಿಕೊಡುವ ಜವಾಬ್ದಾರಿ ತಾಯಿಯದ್ದಾಗಿದೆಯೆಂದು ಸಾಹಿತಿ ಕವಿತಾ ದಂಡಿನ ಅಭಿಪ್ರಾಯಪಟ್ಟರು.

ಜ್ಞಾನಭಾರತಿ ವಿದ್ಯಾಸಂಸ್ಥೆಯ ಶ್ರೀನಿವಾಸ ನರಗುಂದಕರ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯ ಮಕ್ಕಳ ಸಂಸ್ಕಾರ-ಸಾಂಸ್ಕೃತಿಕ ಮೇಳದಲ್ಲಿ ಮಕ್ಕಳ ಪರೀಕ್ಷಾ ತಯಾರಿಕೆಯಲ್ಲಿ ಪಾಲಕರ ಕರ್ತವ್ಯ ಹಾಗೂ ಕೌಟುಂಬಿಕ ಜೀವನದಲ್ಲಿ ಸಂಸ್ಕಾರ ಅಳವಡಿಕೆಯಲ್ಲಿ ಮಾತೆಯರ ಪಾತ್ರ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಮೌಲ್ಯ ಶಿಕ್ಷಣವು ಮಕ್ಕಳಲ್ಲಿ ಉತ್ತಮ ಸಂಸ್ಕಾರವನ್ನುಂಟು ಮಾಡುತ್ತದೆ. ಮಕ್ಕಳು ಮೊಬೈಲ್ ದಾಸರಾಗುತ್ತಿದ್ದಾರೆ. ಇದು ಅತ್ಯಂತ ಅಪಾಯಕಾರಿಯಾಗಿದೆ. ಮೊಬೈಲ್‌ಗಳ ಅತೀಯಾದ ಬಳಕೆಯಿಂದ ವಿದ್ಯಾರ್ಥಿಗಳ ಮೆದುಳಿನ ಮೇಲೆ ತೀವ್ರ ಪರಿಣಾಮವುಂಟಾಗುತ್ತಿದೆ. ಮಕ್ಕಳು ಒಂಟಿತನವನ್ನು ಹೆಚ್ಚಾಗಿ ಪ್ರೀತಿಸುತ್ತಾರೆ. ಪರಿಣಾಮವಾಗಿ ಮಕ್ಕಳು ಮನೆ, ಶಾಲೆಗಳಲ್ಲಿ ಅಗತ್ಯಕ್ಕಿಂತ ಹೆಚ್ಚಿನ ಪ್ರಮಾಣದಲ್ಲಿ ಮೌನಿಗಳಾಗುತ್ತಿದ್ದಾರೆ. ಮೊಬೈಲ್ ಮಾತ್ರವೇ ಅವರ ಬದುಕು ಎಂಬಂತಾಗಿದೆ. ಪಾಲಕರು ತಮ್ಮ ಮಕ್ಕಳ ಬಗ್ಗೆ ನಿಗಾವಹಿಸಬೇಕು. ಮಕ್ಕಳು ಮೊಬೈಲ್‌ನಲ್ಲಿ ಏನು ವೀಕ್ಷಿಸುತ್ತಿದ್ದಾರೆಂಬ ಬಗ್ಗೆ ಪಾಲಕರು ಸತತ ನಿಗಾವಹಿಸುವಂತೆ ಮನವಿ ಮಾಡಿದರು.




ಜ್ಞಾನಭಾರತಿ ವಿದ್ಯಾ ಸಂಸ್ಥೆಯ ಅಧ್ಯಕ್ಷ ಪಂ. ಶ್ರೀಧರಚಾರ್ಯ ಶಿರಹಟ್ಟಿ ಮಾತನಾಡಿ, ಹಿರಿಯರು ನಮ್ಮ ಆಸ್ತಿ. ಅವರ ಅನುಭವಗಳು ನಮಗೆ ದಾರಿದೀಪ. ನಮ್ಮ ಸಂಸ್ಕೃತಿಯ ಪ್ರತಿಬಿಂಬವೇ ಹಿರಿಯರು. ಅವರ ನಡೆ-ನುಡಿ ಮಕ್ಕಳ ಬದುಕಿಗೆ ಮಾರ್ಗದರ್ಶನವಾಗಿವೆಯೆಂದರು.

ಇಂದಿನ ತಾಂತ್ರಿಕ ಯುಗದಲ್ಲಿ ಮಕ್ಕಳು ವೈಜ್ಞಾನಿಕ ಮನೋಭಾವದೊಂದಿಗೆ ಉತ್ತಮ ಕಲಿಕಾ ಪ್ರವೃತ್ತಿಯನ್ನು ಅಳವಡಿಸಿಕೊಂಡು ಮುಂದೆ ಬರಲು ಪ್ರಯತ್ನಶೀಲರಾಗಬೇಕು. ಕುಟುಂಬದಲ್ಲಿ ಮಕ್ಕಳ ಆಸಕ್ತಿ ಬಗೆಗೆ ಕಾಳಜಿ ಹೊಂದಿ ಅವರ ಉನ್ನತ ಭವಿಷ್ಯದತ್ತ ಎಲ್ಲರೂ ಚಿಂತಿಸಬೇಕು ಎಂದರು.

ಸಂಪನ್ಮೂಲ ವ್ಯಕ್ತಿ ಶಿಲ್ಪಾ ಹಳ್ಳಿಕೇರಿ ಮಾತನಾಡಿ, ಶಾಲೆಗಳೊಂದಿಗೆ ಪಾಲಕರು ನಿಕಟ ಸಂಪರ್ಕಹೊಂದಿ ತಾವೂ ಕೈಜೋಡಿಸಿ ಮಗುವಿನ ಶೈಕ್ಷಣಿಕ ಅಭಿವೃದ್ಧಿಗೆ ಶ್ರಮಿಸಬೇಕು. ಮಕ್ಕಳಲ್ಲಿ ಓದುವ ಹವ್ಯಾಸ ರೂಢಿಸಬೇಕು ಎಂದರು.

ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪಾರಿತೋಷಕದೊಂದಿಗೆ ಪ್ರಶಸ್ತಿಪತ್ರ ವಿತರಿಸಲಾಯಿತು. ವೇದಿಕೆಯ ಮೇಲೆ ರಾಜಶ್ವೇರಿ ಬೇವಿನಮರದ, ಮುಖ್ಯೋಪಾಧ್ಯಾಯೆ ಮೀನಾಕ್ಷಿ ಕಪ್ಪರದ, ಸರಸ್ವತಿ ಬಡಗೂಳಿಯವರ ಉಪಸ್ಥಿತರಿದ್ದರು.

ವಿದ್ಯಾ ಪೂಜಾರಿ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಮೀನಾಕ್ಷಿ ಕಪ್ಪರದ ಸ್ವಾಗತಿಸಿ ವರದಿ ವಾಚಿಸಿದರು. ಆರ್.ವಿ. ಪಲ್ಲೇದ ಪರಿಚಯಿಸಿದರು. ರುಕ್ಮಿಣಿ ರಾಠೋಡ ನಿರೂಪಿಸಿದರು. ಕರಿಯಪ್ಪ ಹೆಳವಿ ವಂದಿಸಿದರು. ಕಾರ್ಯಕ್ರಮದಲ್ಲಿ ಪಾಲಕರಾದ ಸುಜಾತಾ ಶೆಂದಗೆ, ಸಪೂರಾ ಬೇಗಂ ಖಾಜಿ, ಸುನೀತಾ ದಲಭಂಜನ, ಈಶ್ವರಪ್ಪ ಬೇವಿನಮರದ, ಗೀತಾ ಕುಲಕರ್ಣಿ, ರಾಹುಲ ಮಹೇಂದ್ರಕರ, ಸಯ್ಯದ ಖಾಜಿ ಮುಂತಾದವರು ಉಪಸ್ಥಿತರಿದ್ದರು.

ಸಂಸ್ಥೆಯ ಕಾರ್ಯದರ್ಶಿ ಸೂರ್ಯನಾರಾಯಣ ನರಗುಂದಕರ ಮಾತನಾಡಿ, ಮುಗ್ಧ ಮಕ್ಕಳ ಕನಸಿಗೆ ರೆಕ್ಕೆ ನೀಡುವ ಉನ್ನತ ಕೇಂದ್ರಗಳೇ ಶಾಲೆಗಳು. ಸಂಸ್ಕಾರ-ಸಂಸ್ಕೃತಿ ಮಕ್ಕಳಿಗೆ ಅವಶ್ಯವಾಗಿದ್ದು, ಇದರಿಂದಾಗಿ ಮಕ್ಕಳಲ್ಲಿ ಉತ್ತಮ ಮೌಲ್ಯಗಳು ಒಡಮೂಡುತ್ತವೆ. ಅದಕ್ಕಾಗಿ ಪ್ರತಿಯೊಬ್ಬರೂ ಮಕ್ಕಳಲ್ಲಿ ನೈತಿಕ ಮೌಲ್ಯಗಳನ್ನು, ಹಬ್ಬ-ಹರಿದಿನಗಳ ಮಹತ್ವತೆಯನ್ನು, ಕುಟುಂಬದ ಪರಸ್ಪರ ಪರಿಚಯವನ್ನು ಮಾಡಿಕೊಡಬೇಕು. ಅಂದಾಗ ಮಕ್ಕಳು ಸುಸಂಸ್ಕೃತ ನಾಗರಿಕರಾಗಿ ಬೆಳೆಯುತ್ತಾರೆ ಎಂದರು.

### ಯುರೋ ಕಿಡ್ಸ್ ಶಾಲೆಯ ಪ್ರಥಮ ವಾಷಿಕೋತ್ಸವದಲ್ಲಿ ಎಸ್.ವಿ. ಸಂಕನೂರ

# ಮಕ್ಕಳಿಗೆ ಧೈರ್ಯ, ಆತ್ಮವಿಶ್ವಾಸ ತುಂಬಿ

■ವಿಜಯಸಾಕ್ಷಿ ಸುದ್ದಿ, ಗದಗ

ಪಾಲಕರು ಮಕ್ಕಳಿಗೆ ಧೈರ್ಯ ಮತ್ತು ಆತ್ಮವಿಶ್ವಾಸವನ್ನು ತುಂಬಿ ಮುನ್ನಡೆಯಲು ಪ್ರೇರಣೆ ನೀಡಬೇಕು. ಇನ್ನೊಂದು ಮಗುವಿನೊಂದಿಗೆ ನಿಮ್ಮ ಮಗುವನ್ನು ಹೋಲಿಕೆ ಮಾಡಬೇಡಿ, ಪ್ರೋತ್ಸಾಹಿಸಿ ಎಂದು ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ ಹೇಳಿದರು.

ಅವರು ಶುಕ್ರವಾರ ನಗರದ ಕೆ.ಸಿ.ರಾಣಿ ರಸ್ತೆಯಲ್ಲಿರುವ ಜ್ಞಾನಶ್ರೀ ಎಜ್ಯುಕೇಶನಲ್ ಟ್ರಸ್ಟ್‌ನ ಯುರೋ ಕಿಡ್ಸ್ ಶಾಲೆಯ ಪ್ರಥಮ ವಾಷಿಕೋತ್ಸವ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಕೆಲವು ಮಕ್ಕಳಿಗೆ ಜ್ಞಾಪಕಶಕ್ತಿ, ವಿಷಯ ಗ್ರಹಿಸುವಿಕೆಯಲ್ಲಿ ಒಂದಿಷ್ಟು ವ್ಯತ್ಯಾಸ ಇರಬಹುದು. ಆದರೆ ಅದನ್ನು ಆ ಮಗುವಿಗೆ ಗೊತ್ತಾಗದ ರೀತಿಯಲ್ಲಿ ಪ್ರೋತ್ಸಾಹಿಸಿ ಅಭ್ಯಾಸಕ್ಕೆ ಅಣಿಗೊಳಿಸಿ. ಮಕ್ಕಳಲ್ಲಿ ಅನುಕರಣೆಯ ಸ್ವಭಾವವು ಪಾಲಕ/ಪೋಷಕರ ಚಲನವಲನ ಗ್ರಹಿಸುತ್ತವೆ. ಆದ್ದರಿಂದ ಪಾಲಕರು ಆದರ್ಶ ಮೌಲ್ಯಗಳನ್ನು ರೂಢಿಸಿಕೊಳ್ಳಬೇಕು ಎಂದರು.





ಮಕ್ಕಳಿಗೆ ಉತ್ತಮ ಶಿಕ್ಷಣ, ಆದರ್ಶ ಮೌಲ್ಯ, ಸಂಸ್ಕಾರ, ಸಂಸ್ಕೃತಿಯನ್ನು ನೀಡಿ ಅವರನ್ನು ಆದರ್ಶ ವ್ಯಕ್ತಿಗಳನ್ನಾಗಿ ಮಾಡಬೇಕು. ಒಳ್ಳೆ ನೈತಿಕ ಶಿಕ್ಷಣ, ಸದ್ಗುಣಗಳಿಂದ ಮಕ್ಕಳನ್ನು ಬೆಳೆಸಬೇಕು. ಅದಕ್ಕೆ ಪೂರ್ವ ಪ್ರಾಥಮಿಕ ಮತ್ತು ಪ್ರಾಥಮಿಕ ಹಂತದ ಶಿಕ್ಷಣ ಪೂರಕವಾಗಿದೆ. ಗದಗ ಪರಿಸರದಲ್ಲಿ ಯುರೋ ಕಿಡ್ಸ್ ಒಳ್ಳೆಯ ಹೆಸರು ಮಾಡಿದೆ ಎಂದರು.

ಅತಿಥಿಯಾಗಿ ಆಗಮಿಸಿದ್ದ ಪ್ರೊ. ಶಿವಾನಂದ ಕಲ್ಲೂರ ಮಾತನಾಡಿ, ಯುರೋ ಕಿಡ್ಸ್ ಒಂದೇ ವರ್ಷದಲ್ಲಿ ಪಾಲಕ/ಪೋಷಕರ ಮೆಚ್ಚುಗೆಗೆ ಪಾತ್ರವಾಗಿದೆ. ಈ ಶಾಲೆಯಿಂದ ಮಕ್ಕಳ ಭವಿಷ್ಯ ಉಜ್ವಲವಾಗಲು ಅಡಿಪಾಯದ ಶಿಕ್ಷಣ ಸಿಗುವಂತಾಗಲಿ ಎಂದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಜ್ಞಾನಶ್ರೀ ಎಜ್ಯುಕೇಶನಲ್ ಟ್ರಸ್ಟ್‌ನ ಅಧ್ಯಕ್ಷ ಡಾ. ಎಚ್.ಐ. ಮಾಳಿ ಸರ್ವರನ್ನು ಸ್ವಾಗತಿಸಿ ಪರಿಚಯಿಸಿದರು. ನಯನಾ ಮಲ್ಲಾಡದ ಪ್ರಾರ್ಥಿಸಿದರು. ಮಕ್ಕಳು ನೃತ್ಯರೂಪಕದೊಂದಿಗೆ ಸ್ವಾಗತಿಸಿದರು. ವಿನ್ಸಂಟ್ ಪಾಟೀಲ ನಿರೂಪಿಸಿದರು. ಟ್ರಸ್ಟ್‌ನ ಕಾರ್ಯದರ್ಶಿ ಡಾ. ಅರುಣಾ ಮಾಳಿ ವಾರ್ಷಿಕ ವರದಿ ಪ್ರಸ್ತುತಪಡಿಸಿ ವಂದಿಸಿದರು.

ಸಮಾರಂಭದಲ್ಲಿ ಮಾರುತಿ ಮಾಳಿ, ಪಿ.ಬಿ. ಭಾವನೂರ, ಡಾ. ಜಗದೀಶ ಶಿರೋಳ, ಸ್ನೇಹಾ ಗೋಡಖಿಂಡಿ, ಊರ್ಮಿಳಾ ಗುರುಪ್ರಸಾದ ಸೇರಿದಂತೆ ಮಕ್ಕಳು ಪಾಲಕ-ಪೋಷಕರು ಉಪಸ್ಥಿತರಿದ್ದರು.

# ಕೊಳಗೇರಿ ಪ್ರದೇಶಗಳ ಅಭಿವೃದ್ಧಿಗೆ ಆಗ್ರಹಿಸಿ ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿಯ ಸ್ಲಂ ಪ್ರದೇಶಗಳಲ್ಲಿ ಯಾವುದೇ ನಾಗರಿಕ ಸೌಲಭ್ಯಗಳಿಲ್ಲದೇ ಸಾವಿರಾರು ಜನರು ದಿನನಿತ್ಯ ನರಕಯಾತನೆ ಅನುಭವಿಸುತ್ತಿದ್ದಾರೆ. ನಗರದ ಬಹುತೇಕ ಸ್ಲಂ ಪ್ರದೇಶಗಳಲ್ಲಿ ಶೌಚಾಲಯಗಳ ವ್ಯವಸ್ಥೆ ಇಲ್ಲದೇ ಕಾರಣ ಮಹಿಳೆಯರು ತೊಂದರೆ ಅನುಭವಿಸುತ್ತಿದ್ದಾರೆ. ಆದ್ದರಿಂದ ಗದಗ-ಬೆಟಗೇರಿ ನಗರದ ಕೊಳಗೇರಿ ಪ್ರದೇಶಗಳ ಅಭಿವೃದ್ಧಿಗಾಗಿ ಅನುದಾನ ಮಂಜೂರು ಮಾಡಬೇಕೆಂದು ಆಗ್ರಹಿಸಿ ಸ್ಲಂ ಜನಾಂದೋಲನ-ಕರ್ನಾಟಕ ಮತ್ತು ಗದಗ ಜಿಲ್ಲಾ ಸ್ಲಂ ಸಮಿತಿ ಪದಾಧಿಕಾರಿಗಳು ಗದಗ ಸ್ಲಂ ಬೋರ್ಡ್ ಅಧಿಕಾರಿಗಳ ಮೂಲಕ ಆಯುಕ್ತರಿಗೆ ಮನವಿಯನ್ನು ಸಲ್ಲಿಸಿದರು. ಸ್ಲಂ ಜನಾಂದೋಲನ-ಕರ್ನಾಟಕ ರಾಜ್ಯ ಸಂಚಾಲಕ ಹಾಗೂ ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಮಾತನಾಡಿ, ನಗರದ ಸ್ಲಂ ಪ್ರದೇಶಗಳ ಜನಸಂಖ್ಯೆಗನುಗುಣವಾಗಿ ಹೆಚ್ಚುವರಿಯಾಗಿ 1500 ಮನೆಗಳನ್ನು ಮಂಜೂರು ಮಾಡಬೇಕು. ಸ್ಲಂ ಪ್ರದೇಶದ ಕುಟುಂಬಗಳಿಗೆ ಭೂಮಿಯನ್ನು ಮಂಜೂರು ಮಾಡಿ ನಿವೇಶನಗಳನ್ನು ವಿತರಿಸಿ ಪುನರ್ವಸತಿ ಕಲ್ಪಿಸಬೇಕು. ಈ ಪ್ರದೇಶಗಳಿಗೆ ಮೂಲಭೂತ ಸೌಲಭ್ಯಗಳಾದ ವಿದ್ಯುತ್ ಸಂಪರ್ಕ, ಶೌಚಾಲಯ, ರಸ್ತೆ, ಚರಂಡಿ, ಮುಂತಾದ ನಾಗರಿಕ ಸೌಲಭ್ಯಗಳನ್ನು ಕಲ್ಪಿಸಲು ಅನುದಾನ ಮಂಜೂರು ಮಾಡಿ ಶೀಘ್ರವೇ ಕಾಮಗಾರಿ ಪ್ರಾರಂಭಿಸಲು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು

ಗದಗ ಜಿಲ್ಲಾ ಸ್ಲಂ ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ, ಮುಖಂಡರಾದ ಇಬ್ರಾಹಿಂ ಮುಲ್ಲಾ, ಮೆಹಬೂಬಸಾಬ ಬಳ್ಳಾರಿ, ಮೆಹರುನಿಸಾ ಡಂಬಳ, ಮಂಜುನಾಥ ಶ್ರೀಗಿರಿ, ಖಾಜಾಸಾಬ ಇಸ್ಮಾಯಿಲನವರ, ಗೌಸ್‌ಸಾಬ ಅಕ್ಕಿ, ಸಲೀಮ ಹರಿಹರ, ಮೈಮುನ ಬೈರಕದಾರ, ದುರ್ಗಪ್ಪ ಮಣವಡ್ಡರ, ಮಕ್ತುಮಸಾಬ ಮುಲ್ಲಾನವರ, ಶಂಕ್ರಪ್ಪ ರೋಣದ, ಈರಪ್ಪ ಬೇವಿನಮರದ, ದಾವಲಸಾಬ ಯಾದಗೇರಿ, ಸಾಕ್ರುಬಾಯಿ ಗೋಸಾವಿ ಮುಂತಾದವರು ಉಪಸ್ಥಿತರಿದ್ದರು.

# ನೂತನ ದೇವಸ್ಥಾನ ಲೋಕಾರ್ಪಣೆ ಫೆ.4ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ರೋಣ ತಾಲೂಕಿನ ಹೊಳೆಆಲೂರ ಗ್ರಾಮದ ಶ್ರೀ ವೀರಭದ್ರೇಶ್ವರ ಹಾಗೂ ಶ್ರೀ ಸುಬ್ರಹ್ಮಣ್ಯಸ್ವಾಮಿ ನೂತನ ದೇವಸ್ಥಾನ ಲೋಕಾರ್ಪಣೆ ಹಾಗೂ ಪ್ರಾಣ ಪ್ರತಿಷ್ಠಾಪನಾ ಕಾರ್ಯಕ್ರಮ ಫೆ. 4ರಂದು ಬೆಳಿಗ್ಗೆ 8 ಗಂಟೆಗೆ ನಡೆಯಲಿದೆ ಎಂದು ಶ್ರೀ ವೀರಭದ್ರೇಶ್ವರ ಸೇವಾ ಟ್ರಸ್ಟ್ ಕಮಿಟಿ ಸದಸ್ಯ ಮಹೇಂದ್ರಗೌಡ ಪಾಟೀಲ ತಿಳಿಸಿದರು.

ಶನಿವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೇವಸ್ಥಾನದ ಲೋಕಾರ್ಪಣೆ ಅಂಗವಾಗಿ ಈಗಾಗಲೇ ಪ್ರತಿನಿತ್ಯ ಆಧ್ಯಾತ್ಮಿಕ ಪ್ರವಚನ ಇತ್ಯಾದಿ ಧಾರ್ಮಿಕ ಕಾರ್ಯಕ್ರಮಗಳು ಆರಂಭವಾಗಿದ್ದು, ಫೆ. 4ರಂದು ಪ್ರಾಣ ಪ್ರತಿಷ್ಠಾಪನೆ ನಡೆಯಲಿದೆ. ಅದೇ ದಿನ ಸಮಾರೋಪ ಸಮಾರಂಭವೂ ನಡೆಯಲಿದೆ ಎಂದು ತಿಳಿಸಿದರು.



ಸಮಾರಂಭದ ಸಾನ್ನಿಧ್ಯವನ್ನು ಮಣಕವಾಡದ ಅಭಿನವ ಮೃತ್ಯುಂಜಯ ಸ್ವಾಮೀಜಿ ವಹಿಸುವರು. ಹುಣಸಘಟ್ಟ-ಚೊಳಚಗುಡ್ಡದ ಗುರುಮೂರ್ತಿ ಶಿವಾಚಾರ್ಯ ಹಾಲಸ್ವಾಮಿಗಳು, ಡಾ. ಶಿವಕುಮಾರಸ್ವಾಮಿಗಳು ಚರಂತಿಮಠ, ಯಚ್ಚರೇಶ್ವರ ಸ್ವಾಮೀಜಿ, ಮರಳಸಿದ್ಧ ದೇವರ, ಪ್ರಭುಸ್ವಾಮಿ ಸರಗಣಾಚಾರಿ ನೇತೃತ್ವ ವಹಿಸಲಿದ್ದಾರೆ. ಶಾಸಕ ಸಿ.ಸಿ. ಪಾಟೀಲ, ಟ್ರಸ್ಟ್ ಕಮಿಟಿ ಅಧ್ಯಕ್ಷ ಚಂದ್ರಕಾಂತಗೌಡ ಪಾಟೀಲ, ಕಾರ್ಯದರ್ಶಿ ಕಲ್ಮೇಶ್ವರ ಸಾಸಳ್ಳಿ ಉಪಸ್ಥಿತರಿರಲಿದ್ದಾರೆ ಎಂದರು.

ನೆರೆಯಿಂದಾಗಿ ಹೊಳೆಆಲೂರ ಗ್ರಾಮ ಸಾಕಷ್ಟು ಹಾನಿ ಅನುಭವಿಸಿತು. ಗ್ರಾಮದ ಕಲ್ಯಾಣಕ್ಕಾಗಿ ಸರಕಾರದ ನೆರವು ಇಲ್ಲದೇ, ಕೇವಲ ದಾನಿಗಳಿಂದ ನಿರ್ಮಿಸಲ್ಪಟ್ಟ ದೇವಸ್ಥಾನ ಈ ಭಾಗದ ಶ್ರದ್ಧಾ ಕೇಂದ್ರವಾಗಿದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪ್ರಾಣಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ಭಾಗಿಯಾಗಬೇಕು ಎಂದು ವಿನಂತಿಸಿದರು.

ಈ ಸಂದರ್ಭದಲ್ಲಿ ಶ್ರೀ ವೀರಭದ್ರೇಶ್ವರ ಸೇವಾ ಟ್ರಸ್ಟ್ ಕಮಿಟಿ ಉಪಾಧ್ಯಕ್ಷ ಮಲ್ಲಿಕಾರ್ಜುನ ಕಂಠಿ, ಸಿದ್ದು ಪಾಟೀಲ ಉಪಸ್ಥಿತರಿದ್ದರು.

# ಮಡಿವಾಳ ಮಾಚಿದೇವರ ಜಯಂತ್ಯುತ್ಸವ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಬೂದಿಹಾಳ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶನಿವಾರ ಶರಣ ಮಡಿವಾಳ ಮಾಚಿದೇವರ ಜಯಂತ್ಯುತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

ರೋಣ ತಾಲೂಕಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ಸಿ.ಕೆ. ಕೇಸರಿ ಮಾತನಾಡಿ, ಶರಣ ಮಡಿವಾಳ ಮಾಚಿದೇವರ ಕಾಲ 1120ರಿಂದ 1130. ಸಿಂದಗಿ ತಾಲೂಕಿನ ದೇವರ ಹಿಪ್ಪರಗಿಯಲ್ಲಿ ಪರುವಯ್ಯ ಸುಜ್ಞಾನವ್ವ ಈ ದಂಪತಿಗಳ ಮಗನಾಗಿ ಜನಿಸಿದರು. ಇವರೊಬ್ಬ ಅವತಾರ ಪುರುಷ. ಶರಣರ ವಸ್ತುಗಳನ್ನು ಮಡಿ ಮಾಡುವುದು ಇವರ ಕಾಯಕ. 12ನೇ ಶತಮಾನದಲ್ಲಿ ದುರ್ಬಲರ ಶೋಷಣೆ, ಜಾತೀಯತೆ, ಮೇಲು-ಕೀಳು, ಮೂಢನಂಬಿಕೆಗಳ ಬಗ್ಗೆ ಸಮಾಜದಲ್ಲಿ ಜನರನ್ನು ತಿದ್ದುವ ಕೆಲಸವನ್ನು ಮಾಡಿದರು ಎಂದರು.




ಕಾರ್ಯಕ್ರಮದಲ್ಲಿ ಮುಖ್ಯ ಶಿಕ್ಷಕ ಬಿ.ವಿ. ದೇಸಾಯಿಪಟ್ಟಿ, ಯಲ್ಲಪ್ಪಗೌಡ ಭರಮಗೌಡ್ರು, ವೀರೇಶ ಮಡಿವಾಳರ, ಮಂಜುನಾಥ ಮಡಿವಾಳ, ಅಂದಪ್ಪ ಮಡಿವಾಳರ, ಶಿವರೆಡ್ಡಿಪ್ಪ ಕರಮಡಿ, ಮುತ್ತಪ್ಪ ಚಿಗರಿ, ಶಾಲಾ ಸಿಬ್ಬಂದಿಯವರು ಮಕ್ಕಳು ಭಾಗವಹಿಸಿದ್ದರು.

ನರೇಗಲ್ಲ ಕೆಜಿಎಸ್ ಶಾಲೆಯಲ್ಲಿ ಶ್ರೀ ಮಡಿವಾಳ ಮಾಚಿದೇವರ ಜಯಂತಿ ಆಚರಿಸಲಾಯಿತು. ಮುಖ್ಯ ಶಿಕ್ಷಕ ಬಸವರಾಜ ಕುರಿ ಮಾತನಾಡಿ, ಅನುಭವ ಮಂಟಪ ಕಟ್ಟುವಲ್ಲಿ ಮಡಿವಾಳ ಮಾಚಿದೇವರ ಕಾಯಕ ಅತಿ ಮಹತ್ವದ್ದು. ದೇಶದ ನಾನಾ ಭಾಗಗಳಿಂದ ಕಲ್ಯಾಣಕ್ಕೆ ಬರುವವರಿಗೆ ಪರೀಕ್ಷಿಸಿ, ಮಡಿ ಹಾಸಿ ಸ್ವಾಗತಿಸುವ ಕೆಲಸ ಅವರದ್ದಾಗಿತ್ತು. ಮಾಚಿದೇವರ ಪರೀಕ್ಷೆಗೊಳಪಡದ ಹೊರತು ಕಲ್ಯಾಣಪುರ ಪ್ರವೇಶದ ಪ್ರಮಾಣಪತ್ರ ಹೊರಗಿನಿಂದ ಬರುವವರಿಗೆ ಸಿಗುತ್ತಿರಲಿಲ್ಲವೆಂಬುದು ಮಾಚಯ್ಯನ ಮಹಾ ಘನತೆಗೆ ಸಾಕ್ಷಿಯಾಗಿದೆ ಎಂದು ಹೇಳಿದರು.

ಎನ್.ಎಲ್. ಚೌವಾಣ, ಎಸ್.ಐ. ಜಗಾಪುರ, ಎಂ.ಪಿ. ಅಣಗೌಡರ, ಡಿ.ವಿ. ಕಳ್ಳಿ, ಜೆ.ಎ. ಪಾಟೀಲ್, ಎಂ.ಎಸ್. ಮಾಳಶೆಟ್ಟಿ, ರಾಜೇಶ್ವರಿ ತೊಂಡಿಹಾಳ, ಸಿಂಧು ಗುಡಿಸಾಗರ ಇದ್ದರು.


ಕರ್ನಾಟಕ ಸರ್ಕಾರ

## ಗ್ರಾಮ ಪಂಚಾಯತ ಕಾರ್ಯಾಲಯ ಆದರಹಳ್ಳಿ

ತಾಲೂಕ : ಲಕ್ಷ್ಮೇಶ್ವರ e-mail adarahalli.shi.gdg@gmail.com ಜಿಲ್ಲಾ : ಗದಗ

ಸಂ.ಗ್ರಾ.ಪಆ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024-25 ದಿನಾಂಕ: 31.01.2025

### ದರಪಟ್ಟಿ ಪ್ರಕಟಣೆ

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಆದರಹಳ್ಳಿ ಇವರು 2023-24 & 2024-25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಪಾರ್ಮ ಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ ಸಂ | ಕಾಮಗಾರಿಗಳ ಹೆಸರು | ಟೆಂಡರ ಮೊತ್ತ |
|---|---|---|
| 1 | ನಾದಿಗಟ್ಟಿ ಗ್ರಾಮದ ಹೇಮಣ್ಣ ಕುರಿ ಅವರ ಹೋಲದಿಂದ ಹಾಲನಗೌಡ ಪಾಟೀಲ ಅವರ ಹೋಲದವರೆಗೆ ರೈತ ಸಂಪರ್ಕ ರಸ್ತೆ ನಿರ್ಮಾಣ | 300000 |
| 2 | ನಾದಿಗಟ್ಟಿ ಗ್ರಾಮದ ಲಕ್ಷ್ಮಣ ವಡ್ಡರ ಮನೆಯಿಂದ ಮುಖ್ಯ ರಸ್ತೆವರೆಗೆ ಸಿ ಸಿ ಗಟಾರ ನಿರ್ಮಾಣ | 416000 |
| 3 | ನಾದಿಗಟ್ಟಿ ಗ್ರಾಮದ ರಾಮಪ್ಪ ವಡ್ಡರ ಮನೆಯಿಂದ ಗಾಳೇಮ್ಮ ದೇವಸ್ಥಾನದ ಕಡೆ ಸಿ ಸಿ ರಸ್ತೆ ನಿರ್ಮಾಣ | 241000 |
| 4 | ನಾದಿಗಟ್ಟಿ ಗ್ರಾಮದ ಹನಮಂತಪ್ಪ ಬನ್ನಿ ಮನೆಯಿಂದ ಹಳ್ಳದವರೆಗೆ ಸಿ ಸಿ ಗಟಾರ ನಿರ್ಮಾಣ | 400000 |
| 5 | ನಾದಿಗಟ್ಟಿ ಗ್ರಾಮದ ಹಂಡಿಯವರ ಓಣಿಯಿಂದ ಗದ್ದಿ ರಸ್ತೆವರೆಗೆ ಸಿ ಸಿ ಗಟಾರ ನಿರ್ಮಾಣ | 400000 |
| 6 | ನಾದಿಗಟ್ಟಿ ಗ್ರಾಮದ ಅಂಗನವಾಡಿಯಿಂದ ಹಳ್ಳದವರೆಗೆ ಸಿ ಸಿ ಗಟಾರ ನಿರ್ಮಾಣ | 80000 |
| 7 | ಆದರಹಳ್ಳಿ ಗ್ರಾಮದ ಛತ್ರಪ್ಪ ಭೀಮಪ್ಪ ಲಮಾಣಿ ಮನೆಯಿಂದ ಉಮೇಶ ಲಮಾಣಿ ಅವರ ಬೈಲು ಜಾಗೆಯವರೆಗೂ ಸಿ ಸಿ ಗಟಾರ ನಿರ್ಮಾಣ | 80000 |
| 8 | ಆದರಹಳ್ಳಿ ಗ್ರಾಮದ 2 ನೇ ವಾರ್ಡ ನ ಅಂಗನವಾಡಿ ಕಂಪೌಂಡವರೆಗೂ ಸಿ ಸಿ ರಸ್ತೆ ನಿರ್ಮಾಣ | 75000 |
| 9 | ಆದರಹಳ್ಳಿ ಗ್ರಾಮದ ದೇನಪ್ಪ ಸಕ್ರಪ್ಪ ಲಮಾಣಿ ಮನೆಯಿಂದ ಉಮೇಶ ಅಮರಪ್ಪ ಲಮಾಣಿ ಮನೆವರೆಗೆ ಸಿ ಸಿ ರಸ್ತೆ ನಿರ್ಮಾಣ | 240000 |
| 10 | ಆದರಹಳ್ಳಿ ಗ್ರಾಮದ ಗುರಪ್ಪ ಗಂಗಪ್ಪ ಲಮಾಣಿ ಮನೆಯಿಂದ ಮಾದೇವಪ್ಪ ಮಾನಪ್ಪ ಲಮಾಣಿ ಮನೆವರೆಗೆ ಸಿ ಸಿ ಗಟಾರ ನಿರ್ಮಾಣ | 219000 |
| 11 | ಆದರಹಳ್ಳಿ ಗ್ರಾಮದ ಸಿದ್ದಪ್ಪ ಕಿಚ್ಚಾಡಿ ಮನೆಯಿಂದ ಮಲ್ಲವ್ವ ಕಟಗಿ ಮನೆವರೆಗೆ ಸಿ ಸಿ ರಸ್ತೆ ನಿರ್ಮಾಣ | 200000 |
| 12 | ಸಂಕದಾಳ ಗ್ರಾಮದ ಬಟ್ಟೂರ ರಸ್ತೆಯ ಕಾಲುವೆಗೆ ಸಿ ಡಿ ನಿರ್ಮಾಣ | 350000 |
| 13 | ಆದರಹಳ್ಳಿ ಗ್ರಾಮದ 2 ನೇ ವಾರ್ಡನ ಧರ್ಮಪ್ಪ ಶಂಕ್ರಪ್ಪ ಲಮಾಣಿ ಮನೆ ಹತ್ತಿರ ಸಿ ಡಿ ನಿರ್ಮಾಣ | 80000 |
| 14 | ಆದರಹಳ್ಳಿ ಗ್ರಾಮದ 2 ನೇ ವಾರ್ಡನ ಮಂಜಪ್ಪ ರಾಮಪ್ಪ ಲಮಾಣಿ ಮನೆಯಿಂದ ಹೂವಪ್ಪ ಸೋಮಪ್ಪ ಲಮಾಣಿ ಮನೆವರೆಗೆ ಸಿ ಸಿ ರಸ್ತೆ ನಿರ್ಮಾಣ | 75000 |
| 15 | ಆದರಹಳ್ಳಿ ಗ್ರಾಮದ 2 ನೇ ವಾರ್ಡನ ರವಿರಾಜ ಲಚ್ಚಪ್ಪ ಲಮಾಣಿ ಮನೆಯಿಂದ ದಾನಪ್ಪ ಶಿವಪ್ಪ ಲಮಾಣಿ ಮನೆವರೆಗೆ ಸಿ ಸಿ ರಸ್ತೆ ನಿರ್ಮಾಣ | 75000 |
| 16 | ಆದರಹಳ್ಳಿ ಗ್ರಾಮದ ಭೀಮಪ್ಪ ಬಾಬಣ್ಣ ಲಮಾಣಿ ಮನೆಯಿಂದ ಮಾನಪ್ಪ ಜಾ ಲಮಾಣಿ ಮನೆವರೆಗೆ ಸಿ ಸಿ ಗಟಾರ ನಿರ್ಮಾಣ | 80000 |
| 17 | ಸಂಕದಾಳ ಗ್ರಾಮದ ಹಾಲೇಶ್ವರ ಗುಡಿ ಹತ್ತಿರದ ಕೈಪಂಪಿಗೆ ಬೋರವೆಲ್ ರಿಚಾರ್ಜ ಪೀಟ್ ಮಾಡುವದು | 79600 |
| 18 | ಸಂಕದಾಳ ಗ್ರಾಮದ ಕುಂದ್ರಳ್ಳಿ ರಸ್ತೆ ಕೈಪಂಪಿಗೆ ಬೋರವೆಲ್ ರಿಚಾರ್ಜ ಪೀಟ್ ಮಾಡುವದು | 79600 |
| 19 | ಸಂಕದಾಳ ಗ್ರಾಮದ ದೇವಪ್ಪ ಬಕಾರಿ ಅವರ ಹೊಲದ ಹತ್ತಿರ ಇರುವ ಬೋರವೆಲ್ ರಿಚಾರ್ಜ ಪೀಟ್ ಮಾಡುವದು | 79600 |
| 20 | ಸಂಕದಾಳ ಗ್ರಾಮದ ಚಂದ್ರುಗೌಡ ಪಾಟೀಲ ಅವರ ಹೊಲದ ಹತ್ತಿರ ಇರುವ ಬೋರವೆಲ್ ರಿಚಾರ್ಜ ಪೀಟ್ ಮಾಡುವದು | 79600 |
| 21 | ಸಂಕದಾಳ ಗ್ರಾಮದ ಫಕ್ಕೀರಪ್ಪ ಕಲಿವಾಳ ಅವರ ಬೈಲು ಜಾಗೆಯಿಂದ ಹಾಲಸ್ವಾಮಿ ಮಠದ ಹಿತ್ತಲಿನವರೆಗೆ ಸಿ ಸಿ ರಸ್ತೆ ನಿರ್ಮಾಣ | 150000 |
| 22 | ಸೋಗಿಹಾಳ ಗ್ರಾಮದ ಸೋಮವ್ವ ಭಜಂತ್ರಿ ಮನೆಯಿಂದ ಹಳ್ಳದವರೆಗೆ ಸಿ ಸಿ ಗಟಾರ ನಿರ್ಮಾಣ | 280000 |
| 23 | ಆದರಹಳ್ಳಿ ಗ್ರಾಮದ ಅಡಿವೆಕ್ಕ ರಾ ಆಡಿನವರ ಮನೆಯಿಂದ ಹನಮವ್ವ ವಡ್ಡರ ಅವರ ಮನೆವರೆಗೆ ಸಿ ಸಿ ಗಟಾರ ನಿರ್ಮಾಣ | 75000 |

**ಷರಾ: ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸವುದು ಹಾಗೂ ಪ್ರತಿ ಕಾಮಗಾರಿಯ ಟೆಂಡರ್ ಪಾರಂ ಬೆಲೆ 500.00 ರೂಪಾಯಿಗಳು ನಿಗದಿಪಡಿಸಿದೆ.**

**ನಿಬಂಧನೆಗಳು**

(1) ದರಪಟ್ಟಿ ಅವಧಿ **01-02-2025 ರಿಂದ 10-02-2025** ರವರೆಗೆ (2) ಭರ್ತಿ ಮಾಡಿದ ಟೆಂಡರ್ ಅರ್ಜಿಗಳನ್ನು ಸಲ್ಲಿಸುವ ಕೊನೆಯ **ದಿನಾಂಕ 10-02-2025ರ** ಮಧ್ಯಾಹ್ನ 12.30 ಗಂಟೆ (3) ದರಪಟ್ಟಿ ತೆರೆಯುವ **ದಿನಾಂಕ 12-02-2025ರ** ಮಧ್ಯಾಹ್ನ 12.30 ಗಂಟೆ (4) ಅರ್ಜಿ ಸಲ್ಲಿಸುವ ಆಸಕ್ತ ನೊಂದಾಯಿತರು ಪ್ರತ್ಯೇಕವಾಗಿ ದರಪಟ್ಟಿಗಳನ್ನು ಸಲ್ಲಿಸತಕ್ಕದ್ದು (5) ಜಿಲ್ಲಾ ಪಂಚಾಯತ ಡಿ.ಪಿ.ಸಿ ಲಾಗಿನ್‌ನಲ್ಲಿ ನೊಂದಾಯಿತರು ಆಸಕ್ತ ಸರಬರಾಜುದಾರರು ಮಾತ್ರ ದರಪಟ್ಟಿಗಳನ್ನು ಸಲ್ಲಿಸಬಹುದಾಗಿದೆ (6) ಷರತ್ತುಗಳು ಹಾಗೂ ಸಾಮಗ್ರಿ ವಿವರ ಮತ್ತು ಇತರೆ ವಿಷಯಗಳ ಮಾಹಿತಿಗಾಗಿ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಕಾರ್ಯಾಲಯ ಆದರಹಳ್ಳಿ ಇವರನ್ನು ಕಚೇರಿ ಸಮಯದ ವೇಳೆಯಲ್ಲಿ ಸಂಪರ್ಕಿಸಿ ಪಡೆಯಬಹುದಾಗಿದೆ.

**ಸಹಿ/- ಪಂಚಾಯತ ಅಭಿವೃದ್ಧಿ ಅಧಿಕಾರಿಗಳು**
**ಗ್ರಾಮ ಪಂಚಾಯತ ಗ್ರಾಮ ಪಂಚಾಯತ ಆದರಹಳ್ಳಿ**

**ಸಹಿ/- ಅಧ್ಯಕ್ಷರು**
**ಗ್ರಾಮ ಪಂಚಾಯತ ಗ್ರಾಮ ಪಂಚಾಯತ ಆದರಹಳ್ಳಿ**

ವಾ.ಸಾ.ಇ/ಗದಗ/579/ದೇಶಪಾಂಡೆಪಬ್ಲಿಸಿಟಿ/2024-25


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka